ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 49 RNI Number : KNKAN/25/A2770 23-02-2026 Monday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :49 ರಾಯಚೂರು 23-02-2026 ಸೋಮವಾರ ಪುಟ 04 ಬೆಲೆ ರೂ.2/- ಮೊ:8660146563

ಸಿಎಂ ಕುರ್ಚಿ ಬಿಡಿ, ಒಕ್ಕಲಿಗರ ಮೇಲೆ ನಿಮ್ಮ ಪ್ರೀತಿ ಪ್ರದರ್ಶನಕ್ಕಿದು ಸಕಾಲ: ಹೆಚ್‌ಡಿಕೆ

ಬೆಂಗಳೂರು,ಫೆ.22-

ಒಕ್ಕಲಿಗರನ್ನು ಸಿಎಂ ಮಾಡುವುದು ಕಾಂಗ್ರೆಸ್ಸ್ ೀ ಎನ್ನುವುದಾದರೆ, ತತ್‌ಕ್ಷಣಕ್ಕೇ ನೀವು ಕುರ್ಚಿ ಬಿಡಬೇಕಲ್ಲವೇ? ಒಕ್ಕಲಿಗರ ಮೇಲೆ ನಿಮ್ಮ ಪ್ರೀತಿ ಪ್ರದರ್ಶನಕ್ಕೆ ಇದು ಸಕಾಲ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಸವಾಲು ಹಾಕಿದ್ದಾರೆ.

ಎಕ್ಸ್ ಪೋಸ್ಟ್ ಮೂಲಕ ಸಿಎಂ ಮಾಧ್ಯಮ ಹೇಳಿಕೆಗೆ ತಿರುಗೇಟು ನೀಡಿದ ಅವರು, ಸಿದ್ದರಾಮಯ್ಯನವರೇ, ನಾನು ಸುತ್ತಿ ಬಳಸಿ ಮಾತನಾಡಲ್ಲ. ನೇರವಾಗಿ ವಿಷಯಕ್ಕೇ ಬರುತ್ತೇನೆ. ಸಿದ್ದರಾಮಯ್ಯನವರು ಕುರ್ಚಿಗಾಗಿ ಜಾತಿ ಎಳೆದು ತಂದಿದ್ದಾರೆ ಎಂದು ನಾನು ತಮಾಷೆಗೆ ಹೇಳಿದ್ದಲ್ಲ, ಸೀರಿಯಸ್ಸಾ ಗೇ ಹೇಳಿದ್ದೇನೆ. ತಮಾಷೆಗೆ ಹೇಳಿದ್ದೇನೆ ಎಂದಿಟ್ಟುಕೊಳ್ಳಿ, ನೀವು ಇಷ್ಟುದ್ದ ಉತ್ತರ ಬರೆಯುವ ಅಗತ್ಯವಿರಲಿಲ್ಲ. ಈ ಬಗ್ಗೆ ನೀವು ಸೀರಿಯಸ್ ಆಗಿದ್ದೀರಿ ಎಂಬುದನ್ನು ಬಲ್ಲೆ. ಹಾಗಿದ್ದರೂ ನನ್ನ ಹೇಳಿಕೆಯನ್ನು ನೀವು ತಮಾಷೆಯಾಗಿಯೇ ಸ್ವೀಕರಿಸಿ, ಅಭ್ಯಂತರವಿಲ್ಲ ಎಂದಿದ್ದಾರೆ.

ಸಾಮಾಜಿಕ ನ್ಯಾಯದ ಸೋಗುಕಾರ, ಸಾಮಾಜಿಕ ನ್ಯಾಯದ ಸಂಹಾರಿ ನೀವು. ನಿಮಗೆ ರಾಜಕೀಯ ಶಕ್ತಿ, ಬದುಕು ಕೊಟ್ಟ ದೇವೇಗೌಡರ ಕಡೆ ಬೆಟ್ಟು ಮಾಡುವುದು ಆಘಾತಕಾರಿ. ಇವತ್ತು ನಿಮಗೆ ಸಿಕ್ಕಿರುವ ಅಧಿಕಾರ, ಸಾಮಾಜಿಕ ನ್ಯಾಯಕಾರ ಎಂಬ ಪೋಷಾಕು ಎಲ್ಲವೂ ದೇವೇಗೌಡರ ದೇಣಿಗೆ. ನೀವೂ ಅವರ ಸಾಮಾಜಿಕ ನ್ಯಾಯದ ಫಲ ಮತ್ತು ಫಲಾನುಭವಿ. ಸ್ವಜಾತಿ, ಕುಟುಂಬ



ಎಂದು ಅವರು ಆವತ್ತೇ ಭಾವಿಸಿದ್ದಿದ್ದರೆ ನೀವು ಹಣಕಾಸು ಮಂತ್ರಿ ಆಗುವುದಿರಲಿ, ಅಟ್‌ಲೀಸ್ಟ್ ಒಂದು ನಿಗಮದ ಅಧ್ಯಕ್ಷಗಿರಿಯೂ ದಕ್ಕುತ್ತಿರಲಿಲ್ಲ. ಅಂದು ನಿಮ್ಮನ್ನು ಹಣಕಾಸು ಮಂತ್ರಿ ಮಾಡಲೇಬೇಕೆಂದು ಹಠತೊಟ್ಟ ಗೌಡರಿಗೆ ಅವತ್ತಿನ ಅವರ ಸಮಕಾಲೀನರು ನಿಮ್ಮ ಬಗ್ಗೆ ಏನೆಲ್ಲಾ ಗುಣಾವಗಾನ ಮಾಡಿ ಬಣ್ಣಿಸಿದ್ದರೆನ್ನುವುದು ನಿಮಗೆ ತಿಳಿದಿರಬೇಕಲ್ಲವೇ? ಎಂದು ಪ್ರಶ್ನಿಸಿದ್ದಾರೆ.

ನೀವು ಪಟ್ಟಿ ಮಾಡಿರುವ ಒಕ್ಕಲಿಗ ನಾಯಕರ ಹೆಸರುಗಳನ್ನು ಓದಿದೆ. ಪಾಪ.. ನೀವು ಅವರ ಹೆಸರುಗಳನ್ನು ಉಲ್ಲೇಖಿಸಿ ಅವರನ್ನೂ ಅಪಹಾಸ್ಯ ಮಾಡಿದ್ದೀರಿ. ನೀವೂ ಅಪಹಾಸ್ಯಕ್ಕೆ ತುತ್ತಾಗಿದ್ದಲ್ಲದೆ, ನಗೆಪಾಟಲಿಗೀಡಾಗಿದ್ದೀರಿ. ನಿಮ್ಮ ರಾಜಕೀಯ ಸ್ವಾರ್ಥಕ್ಕೆ ಆ 13 ಜನರ ಶೆಲ್ಟರ್ ಪಡೆದಿದ್ದೀರಿ, ಸರಿ. ಹಾಗಿದ್ದರೆ ಅವರೆಲ್ಲರೂ ದೇವೇಗೌಡರಿಂದ ಅಧಿಕಾರ ಅನುಭವಿಸಲೇ ಇಲ್ಲವೇ? ಆಗ ಅವರೆಲ್ಲರೂ ಕೂತಿದ್ದ ಅಧಿಕಾರ ಸ್ಥಾನಗಳಲ್ಲಿ ದೇವೇಗೌಡರೇ ಕೂತಿದ್ದರಾ? ಅವರೆಲ್ಲರೂ ನಿಮ್ಮಂತೆಯೇ ದೇವೇಗೌಡರ ಶ್ರಮ, ತ್ಯಾಗದಿಂದ ಅಧಿಕಾರ ಉಂಡು, ಪೊಗದಸ್ತಾಗಿ ಬೆಳೆದು ಬೇಲಿ ಹಾರಿದವರು! ನೀವು ಹೇಳಿದಂತೆ ಕುಟುಂಬವೇ ಮಿಗಿಲು ಎಂದು ಗೌಡರು ಭಾವಿಸಿದ್ದಿದ್ದರೆ ಈ ಪಟ್ಟಿಯಲ್ಲಿನ ಒಬ್ಬರೂ ಶಾಸಕ, ಮಂತ್ರಿ, ಎಂಪಿ ಆಗುತ್ತಲೇ ಇರಲಿಲ್ಲ.. ನಿಮ್ಮನ್ನೂ ಸೇರಿಸಿ! ಏನಂತೀರಿ? ನೀವೆಲ್ಲರೂ ನೆರಳು ಕೊಟ್ಟ ವೃಕ್ಷಕ್ಕೆ ನಿರ್ದಯದಿಂದ ಕೊಡಲಿ ಹಾಕಿದಿರಿ. ಉಂಡು ಹೋದರಿ, ಕೊಂಡು ಹೋದರಿ ಎಂದು ಟೀಕಿಸಿದ್ದಾರೆ.

ಸಿದ್ದರಾಮಯ್ಯನವರೇ.. ನಿಮ್ಮ ಸ್ವಾರ್ಥಕ್ಕೆ ಜಾತಿ ಎಳೆದು ತಂದಂತೆ ಹಿರಿಯರಾದ ಕೆಂಗಲ್ ಹನುಮಂತಯ್ಯ, ಕಡಿದಾಳ್ ಮಂಜಪ್ಪ, ಎಸ್.ಎಂ.ಕೃಷ್ಣ ಅವರನ್ನು ಏಕೆ ಎಳೆದು ತರುತ್ತೀರಿ? ಎಸ್.ಎಂ.ಕೃಷ್ಣ ಅವರ ಹೆಸರೇಳುವ ಸಾಸಿವೆ ಕಾಳಷ್ಟು ಯೋಗ್ಯತೆ, ನೈತಿಕತೆ ನಿಮಗಿದೆಯೇ? ಹಿ ಈಸ್ ಅನ್‌ಪಾಲಿಷ್ಡ್ ಡೈಮಂಡ್ ಎಂದು ಸೋನಿಯಾ ಗಾಂಧಿ ಅವರ ಮುಂದೆ ಹೇಳಿ ನೀವು ಕಾಂಗ್ರೆಸ್ ಮೆಟ್ಟಿಲತ್ತಲು ಕಾರಣರಾದ ಎಸ್.ಎಂ.ಕೃಷ್ಣರನ್ನು ಎಷ್ಟು ಕ್ರೂರವಾಗಿ ವಂಚಿಸಿದಿರೆನ್ನುವುದು ಜಗತ್ತು ಬಲ್ಲ ಸತ್ಯ. ರಾಜಕೀಯದ ಕಡೆಗಾಲದಲ್ಲಿ ಅವರನ್ನು ನೀವೆಷ್ಟು ತುಚ್ಛವಾಗಿ ನಡೆಸಿಕೊಂಡಿರಿ ಎನ್ನುವುದನ್ನು ಜನ ಮರೆತಿಲ್ಲ. ಅನ್‌ಪಾಲಿಷ್ಡ್ ಡೈಮಂಡ್ ಕೃಷ್ಣರಿಗೆ ಚೂರಿ ಆಗಿದ್ದು ಎಲ್ಲರೂ ಬಲ್ಲರು ಎಂದು ತಿರುಗೇಟು ನೀಡಿದ್ದಾರೆ.

ಒಕ್ಕಲಿಗರನ್ನು ಬೆಳೆಸಿದ್ದು ಕಾಂಗ್ರೆಸ್ಸು ಅಂತೀರಿ.. ಬರೀ ಬುರಡೆ.. ವಿಧಾನಸೌಧ ಕಟ್ಟಿದ ಕೆಂಗಲ್ ಅವರಿಗೆ ನಿಮ್ಮ ನೆಹರೂ ಕೊಟ್ಟ ಕಿರುಕುಳ, ಮಾಡಿದ ಅಪಮಾನ ಅಷ್ಟಿಷ್ಟಾ? ಸಾಮಾಜಿಕ ನ್ಯಾಯದ ಹರಿಕಾರ ದೇವರಾಜ ಅರಸು ಅವರಿಗೆ ಬೆನ್ನಿಗಿರಿದ ದೂರ್ತರು ಯಾರು? ಯಾವ ಪಕ್ಷದವರು? ಒಕ್ಕಲಿಗರನ್ನು ಸಿಎಂ ಮಾಡುವುದು ಕಾಂಗ್ರೆಸ್ಸ್ ೀ ಎನ್ನುವುದಾದರೆ, ತತ್‌ಕ್ಷಣಕ್ಕೇ ನೀವು ಕುರ್ಚಿ ಬಿಡಬೇಕಲ್ಲವೇ? ಒಕ್ಕಲಿಗರ ಮೇಲೆ ನಿಮ್ಮ ಪ್ರೀತಿ ಪ್ರದರ್ಶನಕ್ಕೆ ಇದು ಸಕಾಲ ಎಂದು ಹೆಚ್‌ಡಿಕೆ ಸವಾಲು ಹಾಕಿದ್ದಾರೆ.

ಸಿದ್ದರಾಮಯ್ಯನವರೇ.. ಒಕ್ಕಲಿಗ ಸಮುದಾಯಕ್ಕೆ ಸಮರ್ಥ ನಾಯಕತ್ವ ನೀಡುವ ಕಾಂಗ್ರೆಸ್ ಉದಾರತೆಯನ್ನು ನಾನು ಸ್ವಾಗತಿಸುವೆ. ಈ ಉದಾರತೆ ನಿಮಗೂ ಬೇಕಲ್ಲವೇ? ಈಗ ನೀವು ಉದಾರತೆ ತೋರಬೇಕು. ಎರಡನೇ ಅವಧಿಗೆ ನೀವು ಸಿಎಂ ಆಗುವ ಮುನ್ನ ಅಗ್ರಿಮೆಂಟ್ ಆಗಿತ್ತಲ್ಲಾ, ಅದನ್ನು ಬಹಿರಂಗವಾಗಿ ಹೇಳುವ ಉದಾರತೆ ತೋರಿ. ದಿಲ್ಲಿಯಲ್ಲಿ ನಿಮ್ಮಿಬ್ಬರ ನಡುವೆ ಆಗಿದ್ದ ಆ ಅಗ್ರಿಮೆಂಟ್‌ಗೆ ಸಾಕ್ಷಿ ಆಗಿದ್ದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ವೇಣುಗೋಪಾಲ್, ಸುರ್ಜಿವಾಲಾಗೆ ನಿಮ್ಮ ಸಾಮಾಜಿಕ ನ್ಯಾಯ,

ಶ್ರೀ ಮಹರ್ಷಿ ವಾಲ್ಮೀಕಿ ಗುರುಪೀಠದ ಸ್ವಾಮೀಜಿಯವರ ಆರೋಗ್ಯ ವಿಚಾರಿಸಿದ ತಿಪ್ಪರಾಜು ಹವಾಲ್ದಾರ್

ರಾಯಚೂರು, ಫೆ 22-ರಾಜನಹಳ್ಳಿ ಶ್ರೀ ಮಹರ್ಷಿ ವಾಲ್ಮೀಕಿ ಗುರುಪೀಠದ ಪೀಠಾಧಿಪತಿ ಶ್ರೀ ಪ್ರಸನ್ನಾನಂದ ಪುರಿ ಮಹಾಸ್ವಾಮೀಜಿ ಅವರ ಆರೋಗ್ಯ ಸ್ಥಿತಿ ಕುರಿತು ವಿಚಾರಿಸಲು ಗ್ರಾಮೀಣ ಮಾಜಿ ಶಾಸಕರಾದ ತಿಪ್ಪರಾಜು ಹವಾಲ್ದಾರ್ ಅವರು ಹೈದರಾಬಾದ್‌ನ ಖಾಸಗಿ ಆಸ್ಪತ್ರೆಗೆ ಭೇಟಿ ನೀಡಿ ಸ್ವಾಮೀಜಿಯವರನ್ನು ಭೇಟಿಯಾಗಿ ಆರೋಗ್ಯ ವಿಚಾರಿಸಿದರು. ಸ್ವಾಮೀಜಿಗಳಿಗೆ ಸಂವಿಧಾನ ಶಿಲ್ಪಿ ಡಾ. ಬಿ ಅಂಬೇಡ್ಕರ್ ಪುಸ್ತಕ ನೀಡಿ ಆರೋಗ್ಯ ವಿಚಾರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ತಿಪ್ಪರಾಜು ಹವಾಲ್ದಾರ್ ಅವರು, ಪೂಜ್ಯ ಶ್ರೀಗಳಿಗೆ ಹೃದಯ ಸಂಬಂಧಿತ ಮೊದಲ ಹಂತದ ಶಸ್ತ್ರಚಿಕಿತ್ಸೆ ಯಶಸ್ವಿಯಾಗಿ ನೆರವೇರಿದ್ದು, ಅರೋಗ್ಯವಾಗಿದ್ದಾರೆ ಎಂದು ತಿಳಿಸಿದರು. ವೈದ್ಯರ ತಂಡವು ಸ್ವಾಮೀಜಿಯವರ ಆರೋಗ್ಯವನ್ನು ನಿಕಟವಾಗಿ ಗಮನಿಸುತ್ತಿದ್ದು, ಚಿಕಿತ್ಸೆ ಉತ್ತಮವಾಗಿ



ಪ್ರತಿಕ್ರಿಯಿಸುತ್ತಿದೆ ಎಂದರು. ಕರ್ನಾಟಕದಾದ್ಯಂತ ಇರುವ ಭಕ್ತಾಧಿಗಳು ಯಾವುದೇ ರೀತಿಯ ಆತಂಕ ಪಡುವ ಅಗತ್ಯವಿಲ್ಲ ಎಂದು ಸ್ಪಷ್ಟಪಡಿಸಿದರು. ಸ್ವಾಮೀಜಿ ಅರೋಗ್ಯದಿಂದ ಇದ್ದು, ನಾಳೆ ವಾರ್ಡ್ ಗೆ ಸ್ಥಳಾಂತರ ಮಾಡಲಿದ್ದಾರೆ ಎಂದರು.ಪ್ರಸ್ತುತ ವೈದ್ಯರು ಸ್ವಾಮೀಜಿಯವರಿಗೆ ಸಂಪೂರ್ಣ ವಿಶ್ರಾಂತಿ ಅಗತ್ಯವಿದೆ ಎಂದು ಸೂಚಿಸಿದ್ದು, ಭಕ್ತಾಧಿಗಳು ಆಸ್ಪತ್ರೆಗೆ ಭೇಟಿ ನೀಡುವ ಪ್ರಯತ್ನ ಮಾಡಬಾರದು, ವೈದ್ಯರ ಸಲಹೆಗಳನ್ನು ಗೌರವಿಸಿ ಸಹಕರಿಸಬೇಕು ಎಂದು ಮನವಿ ಮಾಡಿದರು. ರಾಜ್ಯದ ವಿವಿಧ ಭಾಗಗಳಿಂದ ದೂರವಾಣಿ ಮೂಲಕ ಹಾಗೂ ಜಾಲತಾಣಗಳ ಸ್ವಾಮೀಜಿಯವರ ವಿಚಾರಣೆ ಸಾಮಾಜಿಕ ಮೂಲಕ ಆರೋಗ್ಯ ನಡೆಯುತ್ತಿದ್ದು, ಭಕ್ತರಲ್ಲಿ ಅಪಾರ ಕಾಳಜಿ ವ್ಯಕ್ತವಾಗಿದೆ.

ಪೂಜ್ಯ ಶ್ರೀಗಳು ಶೀಘ್ರ ಗುಣಮುಖರಾಗಿ ಪುನಃ ಧಾರ್ಮಿಕ ಹಾಗೂ ಸಾಮಾಜಿಕ ಸೇವಾ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಲಿ ಎಂಬುದು ಎಲ್ಲರ ಹಾರೈಕೆಯಾಗಿದೆ.

ಇಕೋ ಕ್ಲಬ್ ವತಿಯಿಂದ ವನಭೇಟಿ...

ಪರಿಸರ ಉಳಿದರೆ ಮಾತ್ರ ಮನುಕುಲದ ಉಳಿವು: ಡಾ.ಎರ್ರಿಸ್ವಾಮಿ ಅಭಿಮತ

ಸಿಂಧನೂರು,ಫೆ.22-

ಅನಾದಿಕಾಲದಿಂದ'ಲೂ ಮನುಕುಲವನ್ನು ಸಾಕಿ-ಸಲುಹಿದ ನಮ್ಮ ಈ ಪರಿಸರವನ್ನು ವಿನಾಸ ಮಾಡುತ್ತಿದ್ದೇವೆ. ಪರಿಸರ ಉಳಿಸಿ ದರೆ ಮಾತ್ರ ಮನುಕುಲದ ಉಳಿವು ಸಾಧ್ಯವಾಗುತ್ತದೆ ಎಂದು ಪರಿಸರ ವಿದ್ವಾಂಸ ಮತ್ತು ಸತೀಶ್ ಜಾರಕಿ ಹೊಳಿ ಫೌಂಡೇಷನ್‌ನ ತಾವರಗೇರಾ ಸ್ಪರ್ಧಾತ್ಮಕ ಕೇಂದ್ರದ ಸಂಪನ್ಮೂಲ ವ್ಯಕ್ತಿಗಳಾದ ಡಾ॥ಎರ್ರಿಸ್ವಾಮಿ ಅಭಿಪ್ರಾಯ ವ್ಯಕ್ತಪಡಿಸಿದರು.

ತಾಲೂಕಿನ ಕಲಮಂಗಿ ಹಾಗೂ ವೀರಾಪುರ ಗ್ರಾಮಗಳ ಸರ್ಕಾರಿ ಪ್ರೌಢಶಾಲೆಗಳ ಸಂಯುಕ್ತಾಶ್ರಯ ದಲ್ಲಿ ಸಾಲುಮರದ ತಿಮ್ಮಕ್ಕ ಇಕೋ ಕ್ಲಬ್‌ಗಳ ವತಿಯಿಂದ ವನಬೇಟಿ ಕಾರ್ಯಕ್ರಮದ ಅಂಗವಾಗಿ



ಉಮಲೂಟಿ ಸಮೀಪದ ಸತೀಶ ಜಾರಕಿಹೊಳಿ ಫೌಂಡೇಷನ್ ಅಡಿಯ ನಡೆಯುತ್ತಿರುವ ಬುದ್ದ ವಿಹಾರ ಕೇಂದ್ರದ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ, ವಿಶೇಷ ಉಪನ್ಯಾಸ ನೀಡುತ್ತಾ, ಮುಂದಿನ ಪೀಳಿಗೆ ಸುಂದರ ಮತ್ತು ಸುರಕ್ಷಿತ ಪರಿಸರವನ್ನು ಬಿಟ್ಟು ಕೊಡಬೇಕಾಗಿದೆ. ಪರಿಸರವನ್ನು ಹಾಳುಮಾಡುವುದರಿಂದ ಮನುಷ್ಯ ಜೀವಕ್ಕೆ ಅಪಾಯವಿದೆ. ಪಕ್ಕದ ವಿಜಯನಗರ-ಬಳ್ಳಾರಿ ಜಿಲ್ಲೆಗಳ ಸಂಡೂರ ಮತ್ತು ಸುತ್ತ-ಮುತ್ತ ನಡೆದ ಗಣಿಗಾರಿಕೆಯ ಪರಿಣಾಮ ಪರಿಸರ ನಾಶದ ಜೊತೆಗೆ ಇನ್ನೂ ಕೂಡ ಅನೇಕರು ಶ್ವಾಸಕೋಶ ಸಂಬಂಧಿತ ಮತ್ತು ಇನ್ನಿತರ ಕಾಯಿ

ಯರಗೇರ ಗ್ರಾಮದಲ್ಲಿ ಸಂಜೀವಿನಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಯಶಸ್ವಿ: 282 ಜನರಿಗೆ ವೈದ್ಯಕೀಯ ಸೇವೆ

ರಾಯಚೂರು, ಫೆಬ್ರವರಿ 21: ತಾಲೂಕಿನ ಯರಗೇರ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಸಮಾಜಕಾರ್ಯ ವಿಭಾಗದ ವತಿಯಿಂದ ವಾರ್ಷಿಕ ಸಮಾಜಕಾರ್ಯ ಶಿಬಿರದ ಅಂಗವಾಗಿ ಸಂಜೀವಿನಿ: ಆರೋಗ್ಯದ ಕಡೆಗೆ ಒಂದು ಹೆಜ್ಜೆ ಎಂಬ ಶೀರ್ಷಿಕೆಯಡಿ ಹಮ್ಮಿಕೊಳ್ಳಲಾಗಿದ್ದ ಬೃಹತ್ ಉಚಿತ ಆರೋಗ್ಯ ತಪಾಸಣಾ ಶಿಬಿರವು ಶನಿವಾರ ಅತ್ಯಂತ ಯಶಸ್ವಿಯಾಗಿ ಜರುಗಿತು.



ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ವಿಶ್ವವಿದ್ಯಾಲಯದ ಕುಲಸಚಿವರಾದ ಡಾ. ಎ. ಚನ್ನಪ್ಪ ಅವರು, ಗ್ರಾಮೀಣ ಪ್ರದೇಶಗಳಲ್ಲಿ ಆರೋಗ್ಯ ಜಾಗೃತಿ ಮೂಡಿಸುವುದು ಇಂದಿನ ಅತ್ಯಂತ ಅವಶ್ಯಕ ಕಾರ್ಯವಾಗಿದೆ. ಸರ್ಕಾರದ ಆರೋಗ್ಯ ಸೇವೆಗಳೊಂದಿಗೆ ವಿವಿಧ ಸಂಸ್ಥೆಗಳು ಕೈಜೋಡಿಸಿ ಗ್ರಾಮೀಣ ಜನತೆಗೆ ಗುಣಮಟ್ಟದ ವೈದ್ಯಕೀಯ ಸೇವೆಗಳನ್ನು ತಲುಪಿಸುತ್ತಿರುವುದು ಶ್ಲಾಘನೀಯ. ಇಂತಹ ಶಿಬಿರಗಳು ಸಾರ್ವಜನಿಕರಿಗೆ ಹೆಚ್ಚಿನ ಪ್ರಯೋಜನಕಾರಿಯಾಗಲಿದ್ದು, ಸಮಾಜಕಾರ್ಯ ವಿಭಾಗವು ಇಂತಹ ಆರೋಗ್ಯ ಸೇವೆಗಳ ಪರಿಣಾಮಕಾರಿತ್ವದ ಕುರಿತು ವಿಶೇಷ ಅಧ್ಯಯನ ಕೈಗೊಳ್ಳಬೇಕು ಎಂದು ಕರೆ ನೀಡಿದರು.

ವಿಶ್ವವಿದ್ಯಾಲಯದ ಉಪಕುಲಸಚಿವರಾದ ಡಾ. ವೆಂಕಟೇಶ್ ಕೆ. ಅವರು ಮಾತನಾಡಿ, ವಿವಿಧ ಆರೋಗ್ಯ ಸಂಸ್ಥೆಗಳು ಒಟ್ಟಾಗಿ ಭಾಗವಹಿಸಿ ಗ್ರಾಮೀಣ ಜನತೆಗೆ ಸಮಗ್ರ ಆರೋಗ್ಯ ಸೇವೆ ಒದಗಿಸಿರುವುದು ಸಂತಸದ ವಿಷಯವಾಗಿದೆ. ಪ್ರತಿಯೊಬ್ಬರೂ ತಮ್ಮ ಆರೋಗ್ಯದ ಬಗ್ಗೆ ಕಾಳಜಿ ವಹಿಸಿ ಇಂತಹ ಶಿಬಿರಗಳ ಸದುಪಯೋಗ ಪಡೆಯಬೇಕು ಎಂದು ಹೇಳಿದರು.

ಈ ಬೃಹತ್ ಶಿಬಿರದಲ್ಲಿ ಯರಗೇರ ಹಾಗೂ ಸುತ್ತಮುತ್ತಲಿನ ಗ್ರಾಮಗಳಿಂದ ಒಟ್ಟು 282 ಜನರು ಭಾಗವಹಿಸಿ ಉಚಿತ ವೈದ್ಯಕೀಯ ತಪಾಸಣೆ, ಚಿಕಿತ್ಸೆ ಹಾಗೂ ಔಷಧಿ ಸೇವೆಗಳನ್ನು ಪಡೆದುಕೊಂಡರು. ತಪಾಸಣೆಯ ಜೊತೆಗೆ ಕ್ಷಯರೋಗ (), ಎಚ್‌ಐವಿ (), ತಂಬಾಕು ನಿಯಂತ್ರಣ, ಅಸಾಂಕ್ರಮಿಕ ಕಾಯಿಲೆಗಳು, ಮೆದುಳಿನ ಆರೋಗ್ಯ ಹಾಗೂ ಮಾನಸಿಕ ಆರೋಗ್ಯ ಕುರಿತಾಗಿ ಗ್ರಾಮಸ್ಥರು ಮತ್ತು ಶಾಲಾ

ವಿಜ್ಞಾನ ವಸ್ತು ಪ್ರದರ್ಶನ



ಸಿಂಧನೂರು,ಫೆ.22-

ನಗರದ. ಹೋಲಿ ಫ್ಯಾಮಿಲಿ. ಆಂಗ್ಲ ಮಾಧ್ಯಮ ಶಾಲೆ. ಶಿಶು ವಿಹಾರ. ಪೂರ್ವ ಪ್ರಾಥಮಿಕ. ಪ್ರಾಥಮಿಕ ಪ್ರೌಢಶಾಲೆ. ವತಿಯಿಂದ ಇಂದು. ದಿನಾಂಕ 22/2/2026ರಂದು. ಶಾಲಾ ಮಕ್ಕಳಿಗಾಗಿ. ವಿಜ್ಞಾನ ವಸ್ತು ಪ್ರದರ್ಶನ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಈ ಕಾರ್ಯಕ್ರಮದ ಅಂಗವಾಗಿ ಎಂಟನೆಯ ತರಗತಿಯ ವಿದ್ಯಾರ್ಥಿಗಳ ಪೋಷಕರು. ಭೇಟಿ ನೀಡಿ ಅವರುಗಳು ತಯಾರಿಸಿದ. ಕುಲುಷಿತ ನೀರನ್ನು ಹೇಗೆ ಸ್ವಚ್ಛಗೊಳಿಸಿ. ಗಿಡಮರಗಳಿಗೆ ಸಸ್ಯಗಳಿಗೆ ಹಾಗೂ. ಗೃಹಬಳಕೆಗೆ ಹೇಗೆ ಉಪಯೋಗಿಸಿಕೊಳ್ಳಬಹುದು ಎಂದು. ಪ್ರಯೋಗದ ಮೂಲಕ ಸಂಪೂರ್ಣವಾಗಿ ವಿದ್ಯಾರ್ಥಿನಿಯರು ವಿವರಿಸಿದ್ದರು.

ಈ ಸಂಧರ್ಭದಲ್ಲಿ. ವಿದ್ಯಾರ್ಥಿನಿಯರಾದ. ಕುಮಾರಿ. ಮನಹಾ ಇನಾಯ. ಕುಮಾರಿ. ನೇಸರ ರೆಡ್ಡಿ.ದೀಪ್ತಿ. ಸಾನಿಯಾ.ಹಫಸಾ. ಶ್ರೀನಿಧಿ. ಶಿಕ್ಷಕಿಯಾದ. ಶಕುಂತಲಾ ಅವರು. ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ವಿರಾಟ್ ಹಿಂದೂ ಬೃಹತ್ ಶೋಭಾ ಯಾತ್ರೆ:ಭಾರತೀಯ ಸಂಸ್ಕೃತಿ- ಸಂಸ್ಕಾರ ಶ್ರೀಮಂತವಾಗಿದೆ - ಅಭಿನವ ಶ್ರೀಗಳು

ಸಿರವಾರ , ಫೆ.22: ವಿದೇಶಿಯರು ಸಹ ಭಾರತದ ಸಂಸ್ಕೃತಿ, ಹಿಂದೂ ಧರ್ಮದ ಕಾರ್ಯಗಳನ್ನು ಮೆಚ್ಚಿ, ಒಪ್ಪಿ ಅಪ್ಪುತ್ತಿದ್ದಾರೆ ಎಂದರೆ ನಮ್ಮ ಸಂಸ್ಕೃತಿ ಶ್ರೀಮಂತವಾಗಿದೆ. ಸನಾತನ ಧರ್ಮಕ್ಕೆ ಸಾವಿರಾರು ವರ್ಷಗಳ ಇತಿಹಾಸ ಇದೆ, ಅದನ್ನು ಉಳಿಸುವ ಕೆಲಸವನ್ನು ಮಾಡಬೇಕು ಎಂದು ನವಲಕಲ್ ಬೃಹನ್ಮಠದ ಪೀಠಾಧಿಪತಿ ಅಭಿನವ ಶ್ರೀ ಸೋಮನಾಥ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಪಟ್ಟಣದ ಬಸ್ ನಿಲ್ದಾಣದ ಹತ್ತಿರ ವಿರಾಟ್ ಹಿಂದೂ ಸಮ್ಮೇಳನ ಕಾರ್ಯಕ್ರಮ ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು. ನಮ್ಮ ಪರಂಪರೆ ಹಿಂದಿನ ಕಾಲದಿಂದ ಹಿರಿಯರು ಆಚರಣೆ ಮಾಡಿಕೊಂಡು ಬಂದಿದ್ದಾರೆ. ಧರ್ಮದ ಹಾಗೂ ದೇಶದ ರಕ್ಷಣೆಗೆ ಪ್ರತಿಯೊಬ್ಬರು ಬದ್ದರಾಗಿ ಕೆಲಸ ಮಾಡಬೇಕು ಎಂದರು.

'ಕಲ್ಲೂರು ಶಂಕರಾಚಾರ್ಯರ ಮಠದ ಶಿವಾರಾಮಾನಂದಾ ಸ್ವಾಮೀಜಿ ಮಾತನಾಡಿ ವಿದೇಶಿ ವಸ್ತುಗಳನ್ನು ಬಳಸಿ ಅದರ ಲಾಭವನ್ನು ಪಡೆಯಲು ಸಾಧ್ಯವಿಲ್ಲ, ಸ್ವದೇಶಿ ವಸ್ತುಗಳನ್ನು ಹೆಚ್ಚು ಹೆಚ್ಚು ಬಳಸಿದರೆ, ನಮ್ಮವರಿಗೆ ಹೆಚ್ಚು ಲಾಭವಾಗುತ್ತದೆ ಎಂದರು.

ಬೆಂಗಳೂರು ವಿಶ್ವಹಿಂದೂ ಪರಿಷತ್ ಕ್ಷೇತ್ರಿಯ ಅರ್ಚಕ ಪುರೋಹಿತ ಪ್ರಮುಖರಾದ ಬಸವರಾಜ. ಜಿ, ವಿಶೇಷ ಉಪನ್ಯಾಸದಲ್ಲಿ ಆರ್.ಎಸ್.ಎಸ್ 100 ವರ್ಷದ ಅಂಗವಾಗಿ ದೇಶದ ತುಂಬಾ ವಿರಾಟ್ ಹಿಂದೂ ಉತ್ಸವ



ನಡೆಯುತ್ತಿದೆ.ಇಲ್ಲಿಯವರೆಗೂ 2600 ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ. ಧರ್ಮ ರಕ್ಷಣೆ ಕಾರ್ಯಕ್ಕೆ ಮುಂದಾಗಬೇಕು. ನಮ್ಮ ಮನೆಯಿಂದಲೇ ದರ್ಮ ಜಾಗೃತಿ ಕೆಲಸ ಆಗಬೇಕು. ವಿದೇಶಿಯರು ಸಹ ನಮ್ಮ ಹಿಂದೂ ಧರ್ಮವನ್ನು ಒಪ್ಪಿ ಅಪ್ಪುತ್ತಿದ್ದಾರೆ. ನಮ್ಮ ಪರಂಪರೆ ಆಚರಣೆಗಳನ್ನು ಮುಂದು ವರೆಸಿಕೊಂಡು ಹೋಗಬೇಕು. ಒಂದು ದಿನದ ಕಾರ್ಯಕ್ರಮ ಆಗಬಾರದು.ನಿತ್ಯ ಧರ್ಮ ಆಚರಣೆ ರಕ್ಷಣೆ ಕೆಲಸ ಆಗಬೇಕು.ಎಂದು ವಿರಾಟ್ ಹಿಂದೂ ಸಮ್ಮೇಳನ ಸಮಿತಿಯ ಅಧ್ಯಕ್ಷ ಜಿ.ಲೋಕರಡ್ಡಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಈ ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಬಸನಗೌಡ ಬ್ಯಾಗವಾಟ್ ಜೆ.ಶರಣಪ್ಪಗೌಡ, ಆರ್.ಕೆ.ಅಮರೇಶ ಸಾಹುಕಾರ್, ಮಲ್ಲಿಕಾರ್ಜುನ ಜಕ್ಕಲದಿನ್ನಿ, ಜೆ.ದೇವರಾಜಗೌಡ, ಅಯ್ಯನಗೌಡ ಐರಡ್ಡಿ ಸೇರಿದಂತೆ ಪಟ್ಟಣದ ಮುಖಂಡರು, ಮಹಿಳೆಯರು, ಯುವಕರು, ಹಿಂದೂ ಕಾರ್ಯಕರ್ತರು ಭಾಗವಹಿಸಿದ್ದರು.

ಅದ್ದೂರಿ ಮೆರವಣಿಗೆ : ಕಾರ್ಯಕ್ರಮ ಪೂರ್ವದಲ್ಲಿ ಪಟ್ಟಣದ ಬಸವೇಶ್ವರ ವೃತ್ತದಿಂದ ಬಸ್ ನಿಲ್ದಾಣದ ಜೆ.ಶರಣಪ್ಪಗೌಡ ಇವರ ಜಾಗದ ಆವರಣದ ವರೆಗೆ ಭಾರತಮಾತೆ, ಶ್ರೀರಾಮು, ಛತ್ರಪತಿ ಶಿವಾಜಿ ಭಾವಚಿತ್ರ ಮೆರವಣಿಗೆ ಕವಿತಾಳ ಕಲ್ಮಠದ ಪೀಠನಡೆಯುತ್ತಿದೆ. ಸಿದ್ದಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ಪುಷ್ಪಾರ್ಚನೆ ಮಾಡುವ ಮೂಲಕ ಚಾಲನೆ ನೀಡಿದರು. ಕಣಿ ಮಜಲು, ಕುದುರೆ ಕುಣಿತ, ಡೊಳ್ಳು ಕುಣಿತ, ಕುಂಭ, ಕಳಸ ದೊಂದಿಗೆ ಅದ್ದೂರಿಯಾಗಿ ಶೋಭಾ ಯಾತ್ರೆ ಜರುಗಿತು. ಮಕ್ಕಳ ಛದ್ಮವೇಷ ಗಮನ ಸೆಳೆಯಿತು.

ವಾಲ್ಮೀಕಿ ಪೀಠದ ಗುರುಗಳ ಆರೋಗ್ಯ ವಿಚಾರಿಸಿದ ಶ್ರೀದೇವಿ ನಾಯಕ

ದೇವದುರ್ಗ,ಫೆ.22-

ರಾಯಚೂರು ಜಿಲ್ಲಾ ಪ್ರವಾಸದಲ್ಲಿ ಇದ್ದ ರಾಜನಹಳ್ಳಿ ವಾಲ್ಮೀಕಿ ಗುರುಪೀಠದ ಜಗದ್ಗುರು ಡಾ.ವಾಲ್ಮೀಕಿ ಪ್ರಸನ್ನಾನು ಪುರಿ ಮಹಾಸ್ವಾಮಿಗಳು ಲಘು ಹೃದಯಾಘಾತಕ್ಕೆ ಒಳಗಾಗಿದ್ದರು. ಈಗ ಹೈದರಾಬಾದ್ ಆಸ್ಪತ್ರೆಯಲ್ಲಿ ಗುಣಮುಖರಾಗಿದ್ದಾರೆ.



ಶ್ರೀಗಳು ಬುಧವಾರ ಬೆಳಗ್ಗೆ ತಿಂಥಣಿ ಬ್ರಿಜ್ ಸಮೀಪದ ಬಂಡೊಳ್ಳಿ ಗ್ರಾಮದಲ್ಲಿರುವ ಶ್ರೀ ಮಠದ ಉದ್ದೇಶಿತ ವಿದ್ಯಾಸಂಸ್ಥೆ ಮಾಡುವ ಸ್ಥಳಕ್ಕೆ ಭೆಟ್ಟಿ ನೀಡಿ ಸಮಾಜದ ಮುಖಂಡರೊಂದಿಗೆ ಸ್ಥಳ ವೀಕ್ಷಿಸಿ ಸಭೆ ಕೂಡ ಮಾಡಿದ್ದರು. ನಂತರ ಅಲ್ಲಿಯೇ ಇರುವ ಕನಕಗುರು ಪೀಠಕ್ಕೆ ತೆರಳಿ ಇತ್ತೀಚೆಗೆ ಲಿಂಗೈಕ್ಯರಾಗಿರುವ ಶ್ರೀ ಸಿದ್ದರಾಮಾನಂದ ಪುರಿ ಮಹಾಸ್ವಾಮಿಗಳ ಗದ್ದುಗೆಗೆ ಪೂಜೆ ಸಲ್ಲಿಸಿ ನಮಸ್ಕಾರ ಮಾಡಿ ಅಲ್ಲಿಂದ ಹಟ್ಟಿಯಲ್ಲಿ ನಡೆಯಲಿರುವ ಕಾರ್ಯಕ್ರಮಕ್ಕೆ ತೆರಳಿದ್ದರು. ಬೆಳಿಗ್ಗೆಯಿಂದ ಗುರುಗಳು ಲವಲವಿಕೆಯಿಂದಲೇ ಇದ್ದರು. ಆದರೆ, ಹಟ್ಟಿಯಲ್ಲಿ

ಕಲೆ-ಸಂಗೀತಕ್ಕೆ ಕರ್ನಾಟಕ ಹೆಸರುವಾಸಿ-ಎಂ.ವೈ.ಪಾಟೀಲ



ಕಲಬುರಗಿ,ಫೆ.22-

ಕಲೆ, ಸಾಹಿತ್ಯ, ರಂಗಭೂಮಿ, ಸಂಗೀತಕ್ಕೆ ಕರ್ನಾಟಕ ದೇಶದಲ್ಲಿಯೇ ಹೆಸರುವಾಸಿ. ನಮ್ಮ ಆಚಾರ-ವಿಚಾರ, ಸಂಸ್ಕೃತಿ ಯುವ ಪೀಳಿಗೆಗೆ ಪರಿಚಯಿಸಲು ಇಂತಹ ಕಲೆ, ಸಂಗೀತ, ನಾಟಕಕ್ಕೆ ಪ್ರೋತ್ಸಾಹಿಸುವ ನಿಟ್ಟನಲ್ಲಿ ಸರ್ಕಾರ ಆರ್ಥಿಕ ಶಕ್ತಿ ನೀಡಿ ರಂಗಭೂಮಿಯನ್ನು ಪೋಷಿಸಬೇಕು ಎಂದು ಶಾಸಕ ಎಂ.ವೈ. ಪಾಟೀಲ ಹೇಳಿದರು. ಶನಿವಾರ ಕಲಬುರಗಿ ಜಿಲ್ಲಾಡಳಿತ, ಕಲಬುರಗಿ ನೆಕ್ಸ್ಟ್ ಫೌಂಡೇಷನ್ ಸಂಸ್ಥೆಯು ಬೆಂಗಳೂರಿನ ರಂಗ ಶಂಕರ ಸಹಯೋಗದೊಂದಿಗೆ ಕಲಬುರಗಿ ನಗರದ ಡಾ. ಎಸ್.ಎಂ.ಪಂಡಿತ ರಂಗಮಂದಿರದಲ್ಲಿ ಇದೇ ಫೆಬ್ರವರಿ 21 ರಿಂದ 28 ರವರೆಗೆ ನಡೆಯಲಿರುವ ಕಲಬುರಗಿ ನಾಟಕೋತ್ಸವ-2026ಕ್ಕೆ ನಗಾರಿ ಬಾರಿಸುವ ಚಾಲನೆ ನೀಡಿ ಮಾತನಾಡಿದರು.

ಕಲೆ, ನಾಟಕ, ಸಂಗೀತ ಇದು ಮನುಷ್ಯನ ಹವ್ಯಾಸ. ಸರ್ವ ರೋಗಕ್ಕೆ ಮದ್ದು ಸಂಗೀತ ಎನ್ನುವಂತೆ ನಾಟಕ, ರಂಗಭೂಮಿಯು ನಿಜವಾದ ಕಲಾವಿದನನ್ನು ಸೃಷ್ಠಿಸುತ್ತದೆ. ಆ ನಿಟ್ಟನಲ್ಲಿ ಸುಜಾತಾ ಜಂಗಮಶೆಟ್ಟಿ ನೇತೃತ್ವದಲ್ಲಿ ಕಲಬುರಗಿ ರಂಗಾಯಣಯವು ಸಹ ಹೆಜ್ಜೆ ಇಟ್ಟಿದೆ. ನಮ್ಮ ದೇವಸ್ಥಾನಗಳಲ್ಲಿ ಇಂದಿಗೂ ನಾವು ಶಿಲ್ಪಕೆತ್ತನೆಗಳನ್ನು ಕಾಣುತ್ತೇವೆ. ನಮ್ಮಲ್ಲಿ ದೊಡ್ಡಾಟ ತುಂಬಾ ಫೇಮಸ್. ಆದರೆ ಪ್ರಚಾರದ ಕೊರೆತೆ ಅದು ಬೆಳಕಿಗೆ ಬಂದಿಲ್ಲ. ಅದೇ ಮಂಗಳೂರಿನ ಯಕ್ಷಗಾನ ವಿಶ್ವಪ್ರಸಿದ್ದಿ ಆಯ್ತು ಎಂದು ಕೊರಗಿನಿಂದ ನುಡಿದರು.

ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಹೀರಾ ನಸೀಮ್ ಮಾತನಾಡಿ ರಂಗಶಂಕರ ಸಂಸ್ಥೆಯು ಪ್ಯಾಕೇಜ್ ರೀತಿಯಲ್ಲಿ ಏಳು ದಿನಗಳ ಕಾಲ ನಾಟಕೋತ್ಸವದ ರುಚಿ ಉಣಬಡಿಸಲು ಕಲಬುರಗಿಗೆ ಬಂದಿದೆ. ವಿಶೇಷವಾಗಿ ಯುವ ಸಮೂಹ ಮೊಬೈಲ್ ಗೀಳು, ಸಾಮಾಜಿಕ ಜಾಲತಾಣನಿಂದ ಹೊರಬಂದು ಇಂತಹ ರಂಗಚಟುವಟಿಕೆ ಕಾರ್ಯಕ್ರಮಗಳನ್ನು ವೀಕ್ಷಿಸಬೇಕು ಎಂದು ಕರೆ ನೀಡಿದರು.

ನಾಟಕ ನೋಡಿ,ಜೀವನ ಬದಲಾಗುತ್ತೆ: ರಂಗ ಶಂಕರ ಸಂಸ್ಥೆಯ ಅರುಂಧತಿ ನಾಗ್ ಮಾತನಾಡಿ, ಇಂದಿನಿಂದ 7 ದಿನಗಳ ಕಾಲ ಕಲಬುರಗಿ ನಾಟಕೋತ್ಸವದಲ್ಲಿ ಸುಮಾರು 40 ವರ್ಷ ಅನುಭವವುಳ್ಳ ತಂಡಗಳಿಂದ ವಿಭಿನ್ನ ಪ್ರಕಾರದ ಕಲಬುರಗಿ ಜನರದ ಮುಂದೆ ಪ್ರದರ್ಶನಕ್ಕಿಡಲಾಗುತ್ತಿದೆ. ಕಲಬುರಗಿ ಜಿಲ್ಲಾಡಳಿತ, ರಂಗಾಯಣ ನವ್ಮೊಂದಿಗಿದೆ. ಕಲಬುರಗಿ ಜನ ಬಂದಿ ನಾಟಕ ನೋಡಬೇಕು. ನಾಟಕ ಜೀವನ ಬದಲಾಯಿಸುತ್ತದೆ ಎಂದು ಹೆಮ್ಮೆಯಿಂದ ನುಡಿದರು.

ಶಂಕರ ನಾಗ್ ಅವರ ಸವಿನೆನಪಿಗೆ ಬೆಂಗಳೂರಿನಲ್ಲಿ ರಂಗ ಶಂಕರ ಸಂಸ್ಥೆ ಸ್ಥಾಪಿಸಿದ್ದು, 21 ವರ್ಷದಿಂದ ನಿರಂತರ ರಂಗಭೂಮಿ ಚಟುವಟಿಕೆ ನಡೆಸಲಾಗುತ್ತಿದೆ. ಕೇವಲ 2,500 ರೂ. ಬಾಡಿಗೆ ಪಡೆದು ನಾಟಕ ಪ್ರದರ್ಶನಕ್ಕೆ ಅವಕಾಶ ಮಾಡಿಕೊಡಲಾಗುತ್ತಿದೆ. ಇಲ್ಲಿ ಮದುವೆ, ಪ್ಯಾಶನ್ ಗೆ ಅವಕಾಶ ಇಲ್ಲ, ಕೇವಲ ನಾಟಕ, ರಂಗಭೂಮಿಗೆ ವೇದಿಕೆ ಅವಕಾಶ ಕಲ್ಪಿಸಿದ್ದೇವೆ. ಶಂಕರ ನಾಗ್ ಕಾಲೇಜು ಗೆಳೆಯ. ನಮ್ಮಿಬ್ಬರಿಗೂ ಒಟ್ಟಿಗೆ ಸೆಳೆದದ್ದು ರಂಗಭೂಮಿ. ಶಂಕರ್ ನಾಗ್ ನನ್ನ ಪತಿ ಅಷ್ಟೆ ಅಲ್ಲ, ಅವನೊಬ್ಬ ಒಳ್ಳೆಯ ಮನುಷ್ಯ, ಗೆಳೆಯ, ನಟ ಸಹ ಹೌದು ಎಂದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಶಾಸಕರುಗಳಾದ ಜಗದೇವ ಗುತ್ತೇದಾರ್, ತಿಪ್ಪಣ್ಣಪ್ಪ ಕಮಕನೂರ, ಜೆಸ್ಕಾಂ ಅಧ್ಯಕ್ಷ ಪ್ರವೀಣ ಪಾಟೀಲ ಹರವಾಳ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ್, ನಗರಾಭಿವೃದ್ದಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಕಲಬುರಗಿ ಮಹಾನಗರ ಪಾಲಿಕೆ ಮೇಯರ್ ವರ್ಷಾ ರಾಜೀವ ಜಾನೆ, ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್, ಎಸ್.ಪಿ.ಅಡ್ಡೂರು ಶ್ರೀನಿವಾಸಲು, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಸಹಾಯಕ ಆಯುಕ್ತೆ ಸಾಹಿತ್ಯಾ ಆಲದಕಟ್ಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕಿ ಜಗದೀಶ್ವರಿ, ಕಲಬುರಗಿ ರಂಗಾಯಣ ಆಡಳಿತಾಧಿಕಾರಿ ಸಿದ್ರಾಮ ಶಿಂಧೆ ಸೇರಿದಂತೆ ಅನೇಕ ಅಧಿಕಾರಿಗಳು ಉಪಸ್ಥಿತರಿದ್ದರು. ಕಲಬುರಗಿ ರಂಗಾಯಣ ನಿರ್ದೇಶಕಿ ಸುಜಾತಾ ಜಂಗಮಶೆಟ್ಟಿ ಸ್ವಾಗತಿಸಿದರು. ಶಿವಾನಂದ ಅಣಜಗಿ ನಿರೂಪಿಸಿದರು.



ಜಿಲ್ಲಾ ಪೊಲೀಸ್ ಸಿಬ್ಬಂದಿಗೆ ಡ್ರೋನ್ ತಂತ್ರಜ್ಞಾನ ತರಬೇತಿ ತುರ್ತು ಪ್ರತಿಕ್ರಿಯೆ ಇನ್ನಷ್ಟು ಶಕ್ತಿಶಾಲಿ

ಕೊಪ್ಪಳ, ಫೆ.22-

ಆಧುನಿಕ ತಂತ್ರಜ್ಞಾನವನ್ನು ಪರಿಣಾಮಕಾರಿಯಾಗಿ ಬಳಸುವ ದಿಶೆಯಲ್ಲಿ ಜಿಲ್ಲೆಯ ಪೊಲೀಸ್ ಇಲಾಖೆ ಮತ್ತೊಂದು ಮಹತ್ವದ ಹೆಜ್ಜೆ ಇಟ್ಟಿದೆ. ಜಿಲ್ಲೆಯ ಎಲ್ಲಾ ಪೊಲೀಸ್ ಠಾಣೆಗಳ ಸಿಬ್ಬಂದಿಗೆ ಇಂದು ಡ್ರೋನ್ ಬಳಕೆ ಮತ್ತು ನಿರ್ವಹಣೆ ಕುರಿತ ವಿಶೇಷ ತರಬೇತಿ ಕಾರ್ಯಕ್ರಮ ಆಯೋಜಿಸಲಾಯಿತು.

ಈ ತರಬೇತಿಯನ್ನು ಡ್ರೋನ್ ಪೈಲೆಟ್ ತರಬೇತಿ ಪಡೆದ ಸಿಬ್ಬಂದಿಯವರು ನಡೆಸಿಕೊಟ್ಟು, ಡ್ರೋನ್ ಹಾರಾಟದ ಮೂಲ ತತ್ವಗಳು,

ಸುರಕ್ಷತಾ ಕ್ರಮಗಳು, ಕಾನೂನುಬದ್ಧ ನಿಯಮಗಳು ಹಾಗೂ ತುರ್ತು ಪರಿಸ್ಥಿತಿಗಳಲ್ಲಿ ಡ್ರೋನ್ ಉಪಯೋಗಿಸುವ ವಿಧಾನಗಳ ಬಗ್ಗೆ ಸಮಗ್ರ ಮಾಹಿತಿಯನ್ನು ನೀಡಿದರು.

ಜನಸಮೂಹ ನಿಯಂತ್ರಣ, ಅಪಘಾತ ಸ್ಥಳ ಪರಿಶೀಲನೆ, ಕಣ್ಮರೆಯಾದವರ ಶೋಧ ಕಾರ್ಯಾಚರಣೆ ಹಾಗೂ ಪ್ರಕೃತಿ ವಿಕೋಪದ ಸಂದರ್ಭದಲ್ಲಿ ಡ್ರೋನ್ ಗಳ ಮಹತ್ವವನ್ನು ವಿವರಿಸಲಾಯಿತು. ಪ್ರಾಯೋಗಿಕ ಪ್ರದರ್ಶನದ ಮೂಲಕ ಡ್ರೋನ್ ಕಾರ್ಯವಿಧಾನವನ್ನು ಸಿಬ್ಬಂದಿಗೆ ತಿಳಿಸಲಾಯಿತು. ಈ ತರಬೇತಿಯಿಂದ ಪೊಲೀಸ್ ಸಿಬ್ಬಂದಿಯ ತಾಂತ್ರಿಕ ಸಾಮರ್ಥ್ಯ ಹೆಚ್ಚುವ ನಿರೀಕ್ಷೆಯಿದ್ದು, ಸಾರ್ವಜನಿಕರ ಸುರಕ್ಷತೆ ಮತ್ತು 112 ತುರ್ತು ಸೇವೆಗಳ ಸ್ಪಂದನೆ ಇನ್ನಷ್ಟು ವೇಗವಾಗಲಿದೆ ಎಂದು ಇಲಾಖೆ ತಿಳಿಸಿದೆ.

ಯಾದಗಿರಿ ಡಾನ್ ಬೋಸ್ಕೋ ಡಿಬಿ ಟೆಕ್ ಕ್ಷೇತ್ರ ಅಧಿಕಾರಿ ಮಲ್ಲಿಕಾರ್ಜುನ ಕುರಕುಂದಿಗೆ ರಾಜ್ಯಮಟ್ಟದ ಅತ್ಯುತ್ತಮ ಕಾರ್ಯಕ್ಷಮತಾ ಪ್ರಶಸ್ತಿ



ಯಾದಗಿರಿ, ಫೆ.22-

ಯಾದಗಿರಿಯ ಡಾನ್ ಬೋಸ್ಕೋ ಡಿಬಿ ಟೆಕ್ ಸಂಸ್ಥೆಯಲ್ಲಿ ಕ್ಷೇತ್ರ ಅಧಿಕಾರಿ (ಫೀಲ್ಡ್ ಆಫೀಸರ್) ಆಗಿ ಸೇವೆ ಸಲ್ಲಿಸುತ್ತಿರುವ ಮಲ್ಲಿಕಾರ್ಜುನ ಎಸ್. ಕುರಕುಂದಿ ಅವರು ಕರ್ನಾಟಕ ರಾಜ್ಯ ಮಟ್ಟದ ''ಅತ್ಯುತ್ತಮ ಕ್ಷೇತ್ರ ಅಧಿಕಾರಿ ಕಾರ್ಯಕ್ಷಮತಾ ಪ್ರಶಸ್ತಿ'' ಪಡೆದಿರುವುದು ಸಂಸ್ಥೆ, ಜಿಲ್ಲೆ ಹಾಗೂ ಸಹೋದ್ಯೋಗಿಗಳ ವಲಯದಲ್ಲಿ ಅಪಾರ ಸಂತೋಷ ಮತ್ತು ಹೆಮ್ಮೆಯನ್ನುಂಟುಮಾಡಿದೆ.

ಯಾದಗಿರಿಯ ಡಾನ್ ಬೋಸ್ಕೋ ಡಿಬಿ ಟೆಕ್ ಕೇಂದ್ರದ ಮುಖ್ಯಸ್ಥರಾದ ಫಾ. ಶಾಬು ಫ್ರಾನ್ಸಿಸ್ ಅವರ ಮಾರ್ಗ ದರ್ಶನದಲ್ಲಿ, ಮಲ್ಲಿಕಾರ್ಜುನ ಕುರಕುಂದಿ ಅವರು ಕಳೆದ ಹಲವು ವರ್ಷಗಳಿಂದ ಯುವಕರ ಕೌಶಲ್ಯಾಭಿವೃದ್ಧಿ, ಉಚಿತ ಕೌಶಲ್ಯ ತರಬೇತಿ ಕಾರ್ಯಕ್ರಮಗಳ ಮೊಬೈಲೈಸೇಶನ್, ಉದ್ಯೋಗಾವಕಾಶಗಳ ಪ್ರಚಾರ, ಗ್ರಾಮೀಣ ಹಾಗೂ ನಗರ ಸಮುದಾಯಗಳಲ್ಲಿ ಜಾಗೃತಿ ಮೂಡಿಸುವ ಕಾರ್ಯ, ವಿದ್ಯಾರ್ಥಿ ಮತ್ತು ಪೋಷಕರ ಸಂವಹನ, ಮನೆಭೇಟಿ ಕಾರ್ಯಗಳು ಹಾಗೂ ಸಮಾಜಮುಖಿ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದಾರೆ. ಅವರ ನಿರಂತರ ಶ್ರಮ, ಸಮರ್ಪಣೆ, ಪ್ರಾಮಾಣಿಕ ಕಾರ್ಯಶೈಲಿ ಮತ್ತು ಕ್ಷೇತ್ರ ಮಟ್ಟದಲ್ಲಿ ತೋರಿದ ಪರಿಣಾಮಕಾರಿ ಕಾರ್ಯಕ್ಷಮತೆಯನ್ನು ಗುರುತಿಸಿ ಈ ರಾಜ್ಯಮಟ್ಟದ ಗೌರವ ಪ್ರದಾನ ಮಾಡಲಾಗಿದೆ.

ಬೆಂಗಳೂರು ನಗರದ ಡಿಬಿಎಸ್‌ಎಂ ಕೇಂದ್ರ ದಲ್ಲಿ ಫೆಬ್ರವರಿ 19 ರಿಂದ 21, 2026 ರವರೆಗೆ ನಡೆಯುತ್ತಿರುವ SkillVention 2026 – 20 Years Celebration ರಾಷ್ಟ್ರೀಯ ಮಟ್ಟದ ಕಾರ್ಯಕ್ರಮದ ಅಂಗವಾಗಿ, ದಿನಾಂಕ 19-02-2026 ರಂದು ರಾತ್ರಿ ನಡೆದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಲ್ಲಿಕಾರ್ಜುನ ಕುರಕುಂದಿ ಅವರಿಗೆ ಕರ್ನಾಟಕ ರಾಜ್ಯದ ಅತ್ಯುತ್ತಮ ಕ್ಷೇತ್ರ ಅಧಿಕಾರಿ ಕಾರ್ಯಕ್ಷಮತಾ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು. ಈ ಕಾರ್ಯಕ್ರಮದಲ್ಲಿ ದೇಶದ ವಿವಿಧ ರಾಜ್ಯಗಳಿಂದ ಬಂದ ಡಾನ್ ಬೋಸ್ಕೋ ಸಂಸ್ಥೆಯ ಪ್ರತಿನಿಧಿಗಳು, ತರಬೇತಿ ಸಿಬ್ಬಂದಿ, ಅಧಿಕಾರಿಗಳು ಹಾಗೂ ವಿಶೇಷ ಆಹ್ವಾನಿತರು ಭಾಗವಹಿಸಿದ್ದರು.

ಪ್ರಶಸ್ತಿ ಸ್ವೀಕರಿಸಿದ ಬಳಿಕ ಮಾತನಾಡಿದ ಮಲ್ಲಿಕಾರ್ಜುನ ಕುರಕುಂದಿ ಅವರು, ''ಈ ಗೌರವ ನನಗೆ ಅತ್ಯಂತ ಸಂತೋಷ ಮತ್ತು ಹೆಮ್ಮೆಯನ್ನು ತಂದಿದೆ. ಇದು ನನ್ನ ವೈಯಕ್ತಿಕ ಸಾಧನೆಯಷ್ಟೇ ಅಲ್ಲ, ನಮ್ಮ ಸಂಸ್ಥೆಯ ಸಮೂಹ ಪ್ರಯತ್ನದ ಫಲವಾಗಿದೆ'' ಎಂದು ತಿಳಿಸಿದರು. ಈ ಪ್ರಶಸ್ತಿ ತನ್ನ ಮುಂದಿನ ಸಮಾಜ ಸೇವಾ ಕಾರ್ಯಗಳಿಗೆ ಹೆಚ್ಚಿನ ಪ್ರೇರಣೆಯನ್ನು ನೀಡಲಿದೆ ಎಂದು ಅವರು ಅಭಿಪ್ರಾಯಪಟ್ಟರು.

ಈ ಪ್ರಶಸ್ತಿ ದೊರಕಲು ಸದಾ ತನ್ನ ಕಾರ್ಯಗಳಿಗೆ ಮಾರ್ಗದರ್ಶನ ಮತ್ತು ಬೆಂಬಲ ನೀಡಿದ ಡಾನ್ ಬೋಸ್ಕೋ ಡಿಬಿ ಟೆಕ್ ಯಾದಗಿರಿ ಕೇಂದ್ರದ ಮುಖ್ಯಸ್ಥರಾದ ಫಾ. ಶಾಬು ಫ್ರಾನ್ಸಿಸ್ ಅವರಿಗೆ, ಡಿ ಬಿ ಟೆಕ್ ಸಹೋದ್ಯೋಗಿಗಳು ಹಾಗೂ ಸಂಸ್ಥೆಯ ಎಲ್ಲಾ ಸಿಬ್ಬಂದಿ , ಸಮಾಜ ಸೇವಾ ಸಿಬ್ಬಂದಿ, ರಾಜ್ಯ ಮಟ್ಟದ ಸಿಬ್ಬಂದಿ, ಸಹೋದ್ಯೋಗಿಗಳು ಮತ್ತು ಸ್ನೇಹಿತ ಬಳಗಕ್ಕೆ ಹೃದಯ ಪೂರ್ವಕ ಕೃತಜ್ಞತೆ ಸಲ್ಲಿಸಿದರು. ಅಲ್ಲದೆ ಯುವಕರ ಕೌಶಲ್ಯಾಭಿವೃದ್ಧಿಗೆ ಅವಕಾಶ ನೀಡಿದ ಡಾನ್ ಬೋಸ್ಕೋ ಸಂಸ್ಥೆಗೆ ವಿಶೇಷ ಧನ್ಯವಾದಗಳನ್ನು ಅರ್ಪಿಸಿದರು.

ಮಲ್ಲಿಕಾರ್ಜುನ ಕುರಕುಂದಿ ಅವರಿಗೆ ಈ ರಾಜ್ಯಮಟ್ಟದ ಗೌರವ ದೊರಕಿರುವುದಕ್ಕೆ ಫಾ. ಶಾಬು ಫ್ರಾನ್ಸಿಸ್, ಯಾದಗಿರಿ ಡಿಬಿ ಟೆಕ್ ಸಿಬ್ಬಂದಿ, ಸಮಾಜ ಸೇವಾ ಸಿಬ್ಬಂದಿ, ರಾಜ್ಯ ಮಟ್ಟದ ಸಿಬ್ಬಂದಿ ಹಾಗೂ ಸ್ನೇಹಿತ ಬಳಗ ಹರ್ಷ ವ್ಯಕ್ತಪಡಿಸಿ ಅಭಿನಂದನೆಗಳನ್ನು ತಿಳಿಸಿದರು. ಈ ಸಾಧನೆಯು ಯಾದಗಿರಿ ಜಿಲ್ಲೆಯ ಯುವಕರ ಕೌಶಲ್ಯಾಭಿವೃದ್ಧಿ ಕಾರ್ಯಗಳಿಗೆ ಮತ್ತಷ್ಟು ಉತ್ತೇಜನ ನೀಡಲಿದೆ ಹಾಗೂ ಗ್ರಾಮೀಣ ಪ್ರದೇಶದ ಯುವಕರಲ್ಲಿ ಉದ್ಯೋಗ ಮತ್ತು ಸ್ವಾವಲಂಬನೆಯತ್ತ ಹೊಸ ಆಶಾಕಿರಣ ಮೂಡಿಸಲಿದೆ ಎಂದು ಅವರು ಅಭಿಪ್ರಾಯಪಟ್ಟರು.

ಕೃಷ್ಣಾ ಮೇಲ್ದಂಡೆ ಯೋಜನೆ ಭೂಸ್ವಾಧೀನ ಕುರಿತು ಸಭೆ

ಆದ್ಯತೆಯ ಮೇರೆಗೆ ಪರಿಹಾರ ವಿತರಣೆಗೆ ಕ್ರಮ : ಸಚಿವ ತಿಮ್ಮಾಪೂರ



ಬಾಗಲಕೋಟೆ , ಫೆ.22-

ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ರಕ್ಕೆ ಸಂಬಂಧಿಸಿದಂತೆ ಭೂಸ್ವಾಧೀನಗೊಂಡ ರೈತರಿಗೆ ಆದ್ಯತೆಯ ಮೇರೆಗೆ ಪರಿಹಾರ ವಿತರಣೆಗೆ ಕ್ರಮಕೈಗೊಳ್ಳುವಂತೆ ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಶನಿವಾರ ಜರುಗಿದ ಕೃಷ್ಣಾ ಮೇಲ್ದಂಡೆ ಯೋಜನೆಯ ಭೂಸ್ವಾಧೀನ ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಸರಕಾರ ಘೋಷಿಸಿದ ಐತಿಹಾಸಿಕ ತೀರ್ಪಿನನ್ವಯ ಭೂಸ್ವಾಧೀನಗೊಂಡ ರೈತರಿಗೆ ಸೂಕ್ತ ಪರಿಹಾರವನ್ನು ಸರಕಾರ ಘೋಷಿಸಿದ್ದು, ಭೂಮಿ ಕಳೆದುಕೊಳ್ಳುವ ರೈತರಿಗೆ ಆದ್ಯತೆಯ ಮೇರೆಗೆ ಪರಿಹಾರ ವಿತರಣೆಗೆ ಕ್ರಮವಹಿಸಬೇಕಿದೆ. ಈಗಾಗಲೇ ಭೂಸ್ವಾಧೀನಕ್ಕೆ ಸಂಬಂಧಿಸಿದ ಪ್ರಕರಣಗಳು ನ್ಯಾಯಾಲಯದ ಹಂತದಲ್ಲಿದ್ದು, ಈಗಾಗಲೇ ಐತೀರ್ಪಿನನ್ವಯ ಪರಿಹಾರ ವಿತರಣೆಗೆ ನ್ಯಾಯಾಲಯದ ಅನುಮತಿ ಪಡೆಯುವುದು ಸೂಕ್ತವಾಗಿದೆ ಎಂದು ತಿಳಿಸಿದರು.

ನ್ಯಾಯಾಲಯದ ಅನುಮತಿ ಪಡೆದುಕೊಂಡ ನಂತರ ಭೂಸ್ವಾಧೀನಗೊಳ್ಳುವ ಗ್ರಾಮಗಳನ್ನು ಆದ್ಯತೆಯ ಮೇರೆಗೆ ಪಟ್ಟಿ ಮಾಡಿಕೊಳ್ಳುವಂತೆ ಕೃಷ್ಣಾ ಮೇಲ್ದಂಡೆ ಯೋಜನೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು. ಎಲ್ಲೆಲ್ಲಿ ಮುಳುಗಡೆಯಾಗುತ್ತದೆ ಎಂಬುದನ್ನು ಗುರುತು ಮಾಡಿ ಯೋಜನೆ ರೂಪಿಸಬೇಕು. ಯುಕೆಪಿ ಹಂತ-3 ರಿಂದ ಮುಳುಗಡೆಯಾಗುವ ಜಮೀನುಗಳಲ್ಲಿ ಮೊದಲು ಯಾರಿಗೆ ಆದ್ಯತೆಯ ಮೇಲೆ ಕೊಡಬೇಕೆಂಬುದನ್ನು ಸಭೆಯಲ್ಲಿ ಚರ್ಚಿಸಿದ ಸಚಿವರು ಈ ಬಗ್ಗೆ ಯೋಜನೆ ರೂಪಿಸಿ ನೀಡಲು ತಿಳಿಸಿದರು. ಬಜೆಟ್ ನಂತರ ಮುಖ್ಯಮಂತ್ರಿಗಳು ಜಿಲ್ಲೆಗೆ ಬರಲಿದ್ದು, ಅದಕ್ಕೂ ಪೂರ್ವದಲ್ಲಿ ಪರಿಹಾರ ವಿತರಣೆಯ ಪಟ್ಟಿ ಸಿದ್ದವಾಗಿರಬೇಕು ಎಂದರು.

ಪುನರ್ವಸತಿ ಕೇಂದ್ರಗಳನ್ನು ವರ್ಗಾವಣೆ ಮಾಡಲಾಗಿದೆ. ಅವುಗಳು ಇನ್ನು ಕೆಲವು ಮೂಲಭೂತ ಸೌಲಭ್ಯಗಳು ಬೇಕಾಗಿದ್ದು, ಪುನರ್ವಸತಿ ಕೇಂದ್ರಗಳಲ್ಲಿ ಉಳಿಕೆ ಜಾಗವನ್ನು ಸಹ ಗ್ರಾಮ ಪಂಚಾಯತಿಗೆ ಠರಾವು ಮಾಡಿ ಹಸ್ತಾಂತರಿಸುವ ಕೆಲಸವಾಗಬೇಕು ಎಂದು ಬೀಳಗಿ ಶಾಸಕರ ಜೆ.ಟಿ.ಪಾಟೀಲ ಹೇಳಿದರು. ಅಲ್ಲದೇ ಪುನರ್ವಸತಿ ಕೇಂದ್ರಗಳಲ್ಲಿ ಶಾಲೆ, ಪಿಕೆಪಿಎಸ್‌ಗಳಿಗೆ ಕಟ್ಟಲಿಕ್ಕೆ ಯಾವುದೇ ರೀತಿಯಲ್ಲಿ ಅನಾವಶ್ಯಕ ತೊಂದರೆ ಆಗಬಾರದು ಎಂದು ತಿಳಿಸಿದರು.

ಸಭೆಯಲ್ಲಿ ಬೆಳಗಾವಿ ವಿಭಾಗದ ಆಯುಕ್ತರಾದ ಜಾನಕಿ ಕೆ.ಎಂ, ಜಿಲ್ಲಾಧಿಕಾರಿ ಸಂಗಪ್ಪ, ಜಿಲ್ಲಾ ಪಂಚಾಯತ ಕಾರ್ಯನಿರ್ವಾಹಕ ಶಶಿಧರ ಕುರೇರ, ಯುಕೆಪಿ ಮಾಹಾ ವ್ಯವಸ್ಥಾಪಕ ಗಜಾನನ ಬಾಲೆ, ಯುಕೆಪಿ ವಿಶೇಷ ಜಿಲ್ಲಾಧಿಕಾರಿ ಮಹಾದೇವ ಮುರುಗಿ ಸೇರಿದಂತೆ ಆರ್‌ಈ ಹಾಗೂ ಎಸ್‌ಎಲ್‌ಓಗಳು ಉಪಸ್ಥಿತರಿದ್ದರು.

ಮೂರು ಸಾಲಿನ ತ್ರಿಪದಿ ವಚನಗಳ ಮೂಲಕ ಜಗದ ಸಾರ ತಿಳಿಸಿದ ಸರ್ವಜ್ಞ



ಯಾದಗಿರಿ, ಫೆ.22-

ತ್ರಿಪದಿ ಎಂಬ ಮೂರು ಸಾಲಿನ ವಚನಗಳ ಮೂಲಕ ಜಗದ ಸಾರ ತಿಳಿಸಿದ ಸರ್ವಜ್ಞ ಅವರು ಶ್ರೇಷ್ಠ ಜ್ಞಾನಿಯಾಗಿದ್ದರೆಂದು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಾಬುರಾವ ಕಾಡ್ಲೂರ್ ಹೇಳಿದರು.

ಜಿಲ್ಲಾಡಳಿತ, ಜಿಪಂ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಯಂತ್ಯೋತ್ಸವ ಸಮಿತಿ ಸಂಯುಕ್ತವಾಗಿ ಇಲ್ಲಿನ ಜಿಲ್ಲಾ ಕನ್ನಡ ಸಾಹಿತ್ಯ ಭವನದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಸಂತಕವಿ ಸರ್ವಜ್ಞ ಅವರ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಹಾವೇರಿ ಜಿಲ್ಲೆಯವರಾದ ಪುಷ್ಪದತ್ತ ಎಂಬ ಮೊದಲ ಹೆಸರಿನ ಇವರು ನಂತರ ವಚನಗಳ ರಚನೆ ಮೂಲಕ ಸರ್ವಜ್ಞನೆಂದು ಪ್ರಸಿದ್ಧಿಯಾದರು. ಬಾಲ್ಯದಲ್ಲಿಯೇ ಅಗಾಧವಾದ ಪಾಂಡಿತ್ಯವನ್ನು ಶಿವನ ವರಪ್ರಸಾದದಿಂದ ಪಡೆದಿದ್ದರೆಂದರು.

ಸರ್ವಜ್ಞ ರಚಿಸಿದ ಸುಮಾರು 7070 ತ್ರಿಪದಿ ವಚನಗಳು ಲಭ್ಯವಾಗಿದೆಯೆಂಬುವುದು ತಜ್ಞರ ಅಭಿಪ್ರಾಯವಾಗಿದೆ. ಅವರ ಜೀವನ ಆರ್ದಶಗಳನ್ನು ಎಲ್ಲರೂ ಅಳವಡಿಸಿಕೊಳ್ಳಬೇಕೆಂದು ಕಾಡ್ಲೂರ ಹೇಳಿದರು.

ಸರ್ವಜ್ಞ ಭವನಕ್ಕೆ ನಿವೇಶನ ಕೇಳಿದ ಹಿನ್ನಲೆಯಲ್ಲಿ ನಿವೇಶನ ನೀಡುವ ಭರವಸೆ ಬಾಬುರಾವ ಕಾಡ್ಲೂರ ನೀಡಿದರು.

ವಿಶೇಷ ಉಪನ್ಯಾಸ ನೀಡಿದ ಅಯ್ಯಮ್ಮ ಜೇಗಾಂ ಸೌರಾಷ್ಟ್ರಹಳ್ಳಿ ಅವರು, ಸರ್ವಜ್ಞ ಎಂದರೆ ಸಂಸ್ಕತದಲ್ಲಿ ಎಲ್ಲವನ್ನೂ ತಿಳಿದವರು ಎಂದರ್ಥ. ಇವರು ಕನ್ನಡದ ತ್ರಿಪದಿ ಸಾಹಿತ್ಯದ ಪ್ರಮುಖ ಕವಿ. ಪ್ರಮುಖವಾಗಿ ತ್ರಿಪದಿಗಳೆಂಬ

ಮೂರು ಸಾಲಿನ ವಚನಗಳನ್ನು ರಚಿಸಿರುವ ಮೂಲಕ ಅಲ್ಪ ಶಬ್ದಗಳಲ್ಲಿ ಅಗಾಧವಾದುದನ್ನೂ ತಿಳಿಸಿದ ಪರಮಜ್ಞಾನಿ ಎಂದರು. ಇವರು ಜೀವಿಸಿದ್ದ ಕಾಲ ಸುಮಾರು 17ನೇ ಶತಮಾನದ ಆದಿಭಾಗ ಎಂದು ಪ್ರತಿಪಾದಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ತಹಸೀಲ್ದಾರ ಸುರೇಶ ಅಂಅಲಗಿ, ಯುವ ಕ್ರೀಡಾ ಇಲಾಖೆ ಅಧಿಕಾರಿ ರಾಜು ಭಾವಿಹಳ್ಳಿ, ಕುಂಬಾರ ಸಮಾಜದ ಜಿಲ್ಲಾಧ್ಯಕ್ಷ ದೇವಿಂದ್ರಪ್ಪ ದರ್ಶನಾಪುರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಮಠಪತಿ ಇದ್ದರು.



ಉಪ ಚುನಾವಣೆ : ಸೆಕ್ಟರ ಅಧಿಕಾರಿಗಳ ಸಭೆ

ಬಾಗಲಕೋಟೆ , ಫೆ..22-

ಮುಂಬರುವ ಬಾಗಲಕೋಟೆ ವಿಧಾನಸಭಾ ಮತಕ್ಷೇತ್ರದ ಚುಣಾವನೆಯನ್ನು ನಿಷ್ಪಕ್ಷಪಾತ, ಪಾರದರ್ಶಕ ಹಾಗೂ ಶಾಂತಿಯುತವಾಗಿ ನಡೆಸುವ ಉದ್ದೇಶದಿಂದ ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ಸಂಗಪ್ಪ ಅವರ ಅಧ್ಯಕ್ಷತೆಯಲ್ಲಿ ಸೆಕ್ಟರ ಅಧಿಕಾರಿಗಳ ಸಭೆ ಶನಿವಾರ ಜರುಗಿತು. ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಜರುಗಿದ ಸಭೆಯಲ್ಲಿ ಮಾತನಾಡಿದ ಜಿಲ್ಲಾ ಚುನಾವಣಾಧಿಕಾರಿಗಳು ಬಾಗಲಕೋಟೆ ವಿಧಾನಸಭಾ ಮತಕ್ಷೇತ್ರದಲ್ಲಿ ಒಟ್ಟು 319 ಮತಗಟ್ಟೆಗಳು ಇದ್ದು, 29 ಸೆಕ್ಟರ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಪ್ರತಿ ಸೆಕ್ಟರ ಅಧಿಕಾರಿ ತಮ್ಮ ವ್ಯಾಪ್ತಿಯ ಮತಗಟ್ಟೆಗಳನ್ನು ಸಮಗ್ರವಾಗಿ ಪರಿಶೀಲಿಸಿ ಮೂಲಭೂತ ಸೌಲಭ್ಯಗಳಾದ ಕುಡಿಯುವ ನೀರು, ವಿದ್ಯುತ್, ಶೌಚಾಲಯ, ರ್‍ಯಾಂಪ್ ವ್ಯವಸ್ಥೆ ಸೇರಿದಂತೆ ಇತರೆ ಎಲ್ಲ ಸಿದ್ದತೆಗಳನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸಲು ಸೂಚನೆ ನೀಡಿದರು. ತಮ್ಮ ಮತಗಟ್ಟೆ ವ್ಯಾಪ್ತಿಯಲ್ಲಿ ಬರುವ ಮತದಾರರ ಪಟ್ಟಿಯನ್ನು ಪರಿಶೀಲನೆ ಮಾಡಿ, ಮತಗಟ್ಟೆಗಳ ಸ್ಥಳಬದಲಾವಣೆ ಅವಶ್ಯವಾಗಿದ್ದಲ್ಲಿ ಮತಗಟ್ಟೆ ಅಧಿಕಾರಿಗಳಿಂದ ವರದಿ ಪಡೆದುಕೊಂಡು ಬದಲಾವಣೆ ಪ್ರಸ್ತಾವನೆ ಸಲ್ಲಿಸಲು ತಿಳಿಸಿದರು. ದುರ್ಬಲ ಪ್ರದೇಶಗಳನ್ನು ಗುರುತಿಸುವಲ್ಲಿ ಸೆಕ್ಟರ ಅಧಿಕಾರಿಗಳು ಹಾಗೂ ಪೊಲೀಸ್ ಸೆಕ್ಟರ ಅಧಿಕಾರಿಗಳು ಜಂಟಿಯಾಗಿ ಸ್ಥಳ ತನಿಖೆ ಕೈಗೊಂಡು ಭಯಕ್ಕೆ ಒಳಗಾಗುವ ಮತದಾರ ಅಥವಾ ಮತದಾರರ ಸಮುದಾಯ ಗುಂಪುಗಳನ್ನು ಗುರುತಿಸುವ, ಭೀತಿ ಹುಟ್ಟಿಸುವ ಜನರನ್ನು ಗುರುತಿಸಿ, ಭೀತಿಯನ್ನು ಹೋಗಲಾಡಿಸಲು ಕ್ರಮಕೈಗೊಳ್ಳುವ ಕಾರ್ಯವಾಗಬೇಕು ಎಂದರು. ದುರ್ಬಲ ಪ್ರದೇಶಗಳ ಮ್ಯಾಪಿಂಗ್ ಮಾಡುವಲ್ಲಿ ಕ್ರಮಗಳನ್ನು ಅನುಸರಿಸಬೇಕು. ತಯಾರಿಸಿದ ದುರ್ಬಲ ಪ್ರದೇಶದ ಮ್ಯಾಪಿಂಗ್‌ನ್ನು ಸಹಾಯಕ ಚುನಾವಣಾಧಿಕಾರಿ ಆಗಿರುವ ತಹಶೀಲ್ದಾರರು ಪರಿಶೀಲಿಸಿ ನಂತರ ಉಪವಿಭಾಗಾಧಿಕಾರಿಗಳಿಗೆ ಸಲ್ಲಿಸಬೇಕು. ಉಪವಿಭಾಗಾಧಿಕಾರಿಗಳು ಸಹ ಪರಿಶೀಲಿಸಿ ಜಿಲ್ಲಾ ಚುನಾವಣಾಧಿಕಾರಿಗಳಿಗೆ ಸಲ್ಲಿಸಲು ತಿಳಿಸಿದರು. ಸಹಾಯಕ ಚುನಾವಣಾಧಿಕಾರಿಗಳು ಕಳೆದ ಮೂರು ಚುನಾವಣೆಗಳನ್ನು ಆಧಾರವಾಗಿಟ್ಟುಕೊಂಡು ಕ್ರಿಟಿಕಲ್ ಮಗಟ್ಟೆಗಳನ್ನು ಗುರುತಿಸುವ ಕೆಲಸವಾಗಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ತಹಶೀಲ್ದಾರ ವಾಸುದೇವ ಸ್ವಾಮಿ, ಚುನಾವಣಾ ವಿಭಾಗದ ಮಹೇಶ ಪಾಂಡವ ಸೇರಿದಂತೆ ಸೆಕ್ಟರ ಅಧಿಕಾರಿಗಳು ಉಪಸ್ಥಿತರಿದ್ದರು.

ಕಲ್ಯಾಣ ಕರ್ನಾಟಕ ಮಟ್ಟದ ಶಟಲ್ ಬ್ಯಾಡ್ಮಿಂಟನ್ ಟೂರ್ನಮೆಂಟ್‌ಗೆ ಶಾಸಕ ಶರಣಗೌಡ ಕಂದಕೂರರಿಂದ ಚಾಲನೆ



ಯಾದಗಿರಿ, ಫೆ.22-

ಕ್ರೀಡೆಗಳು ದೈಹಿಕವಾಗಿ ಗಟ್ಟಿಗೊಳ್ಳುವುದರ ಜತೆಗೆ ಮಾನಸಿಕವಾಗಿ ದೃಢತೆ ಮೂಡಿಸುತ್ತವೆ ಎಂದು ಶಾಸಕ ಶರಣಗೌಡ ಕಂದಕೂರ ಹೇಳಿದರು.

ಮಾಜಿ ಶಾಸಕ ದಿ. ನಾಗನಗೌಡ ಕಂದಕೂರ್ ಅವರ ದ್ವಿತೀಯ ಪುಣ್ಯಸ್ಮರಣೆಯ ಅಂಗವಾಗಿ, ನಾಗನಗೌಡ ಕಂದಕೂರ್ ಫೌಂಡೇಶನ್ ವತಿಯಿಂದ ಶನಿವಾರ ನಗರದ ಹೊಸಳ್ಳಿ ರಸ್ತೆಯ ಎನ್‌ಎಸಿ ಸ್ಪೋರ್ಟ್ಸ್ ಅಕಾಡೆಮಿಯಲ್ಲಿ ಹಮ್ಮಿಕೊಂಡಿದ್ದ ಕಲ್ಯಾಣ ಕರ್ನಾಟಕ ಮಟ್ಟದ ಶಟಲ್ ಬ್ಯಾಡ್ಮಿಂಟನ್ ಟೂರ್ನಮೆಂಟ್ ಗೆ ಚಾಲನೆ ನೀಡಿ ಅವರು ಮಾತನಾಡಿದರು.

ಸಕರಾತ್ಮಕವಾಗಿ ಆಟಗಳು ಆಡಬೇಕು. ಕ್ರೀಡಾಪಟುಗಳಲ್ಲಿ ಸ್ಪರ್ಧಾ ಮನೋಭಾವನೆ ಇರಬೇಕೇ ಹೊರತು ದ್ವೇಷ ಭಾವನೆ ಹೊಂದಿರಬಾರದೆಂದರು.

ಸೋಲು,ಗೆಲುವು ಸಮಾನವಾಗಿ ಸ್ವೀಕರಿಸಬೇಕು, ಸೋಲೆ ಗೆಲುವಿನ ಮೆಟ್ಟಿಲು ಎಂಬುವುದು ಪ್ರತಿ ಆಟಗಾರರು ಅರ್ಥ ಮಾಡಿಕೊಳ್ಳಬೇಕೆಂದರು.

ತಮ್ಮ ತಂದೆ ದಿ. ನಾಗನಗೌಡ ಕಂದಕೂರ ಅವರ ಸಮಾಜಮುಖಿ ಚಿಂತನೆಗಳನ್ನು ಸ್ಮರಿಸುತ್ತಾ, ನಮ್ಮ ಅಪ್ಪಾಜಿಯವರು ಸದಾ ಜನಸೇವೆಯನ್ನೇ ಉಸಿರಾಗಿಸಿಕೊಂಡಿದ್ದರು. ಅವರ ನೆನಪನ್ನು ಅರ್ಥಪೂರ್ಣವಾಗಿಸಲು ಈ ಫೌಂಡೇಶನ್ ಸ್ಥಾಪಿಸಲಾಗಿದೆ, ಕೊಪ್ಪಳದ ಶ್ರೀಗಳ ಪಾವನ ಸಾನಿಧ್ಯದಲ್ಲಿ ಈ ಫೌಂಡೇಶನ್ ಉದ್ಘಾಟನೆಯಾದಾಗಿನಿಂದ ಇಂದಿಗೂ ಹಸಿರಾಗಿದೆ. ಮೊದಲ ಪುಣ್ಯತಿಥಿಯಂದು ಅಂಗವಿಕಲರಿಗೆ ತ್ರಿಚಕ್ರ ವಾಹನಗಳನ್ನು ವಿತರಿಸುವ ಮೂಲಕ ಅವರ ಜನಸೇವೆಯ ಪರಂಪರೆಯನ್ನು ಮುಂದುವರಿಸಲಾಗಿತ್ತು. ಈ ವರ್ಷ ಕ್ರೀಡಾಪಟುಗಳಿಗೆ ವೇದಿಕೆ ಕಲ್ಪಿಸುವ ಉದ್ದೇಶದಿಂದ ಈ ಟೂರ್ನಮೆಂಟ್ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಗಿರಿಜಿಲ್ಲೆಯಲ್ಲಿ ಸುಸಜ್ಜಿತ ಸ್ಪೋರ್ಟ್ಸ್ ಅಕಾಡೆಮಿ ಸ್ಥಾಪಿಸಿರುವ ಎ???ಸಿ ಅಕಾಡೆಮಿ ಕಾರ್ಯವನ್ನು ಶಾಸಕರು ಮುಕ್ತಕಂಠದಿಂದ ಶ್ಲಾಘಿಸಿದರು. ಪೊಲೀಸ್ ಇಲಾಖೆ ಸಿಬ್ಬಂದಿ ಹಾಗೂ ವಿವಿಧ ಸರ್ಕಾರಿ ಅಧಿಕಾರಿಗಳ ಕ್ರೀಡಾಸಕ್ತಿಯನ್ನು ಕಂಡು ಶಾಸಕರು ಮೆಚ್ಚುಗೆ ವ್ಯಕ್ತಪಡಿಸಿದರು.

ಕರ್ತವ್ಯದ ಒತ್ತಡದ ನಡುವೆಯೂ ಕ್ರೀಡೆಗಳಲ್ಲಿ ಭಾಗವಹಿಸುವುದು ಮಾನಸಿಕ ಆರೋಗ್ಯ ಗಟ್ಟಿಗೊಳಿಸುತ್ತದೆ ಎಂದರು. ಯುವ ಜನತೆ ಕ್ರೀಡೆಗಳಲ್ಲಿ ಹೆಚ್ಚಿನ ಆಸಕ್ತಿ ತೋರಬೇಕೆಂದು ಅವರು ಕರೆ ನೀಡಿದರು.

ಎನ್‌ಎಸಿ ಅಕಾಡೆಮಿಯಿಂದ ಇನ್ನು ವಿವಿಧ ಕ್ರೀಡಾಕೂಟಗಳು ನಿರಂತರವಾಗಿ ನಡೆಯಲಿ ಎಂದು ಹಾರೈಸಿದ ಅವರು, ಟೂರ್ನಮೆಂಟ್ ಯಶಸ್ವಿಯಾಗಲಿ ಎಂದು ಶುಭ ಕೋರಿದರು.

ಈ ಸಂದರ್ಭದಲ್ಲಿ ನಾಗನಗೌಡ ಕಂದಕೂರ್ ಫೌಂಡೇಶನ್‌ನ ಪ್ರಮುಖ ಪದಾಧಿಕಾರಿಗಳು, ಎ???ಸಿ ಅಕಾಡೆಮಿ ಸಂಘಟಕರು,ತರಬೇತುದಾರರು, ಕಲ್ಯಾಣ ಕರ್ನಾಟಕ ಭಾಗದ ವಿವಿಧ ಜಿಲ್ಲೆಗಳಿಂದ ಆಗಮಿಸಿದ ಕ್ರೀಡಾಪಟುಗಳು ಹಾಗೂ ಕ್ರೀಡಾ ಅಭಿಮಾನಿಗಳು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ಸಿಎಂ ಕುರ್ಚಿ ಬಿಡಿ, ಒಕ್ಕಲಿಗರ ಮೇಲೆ ನಿಮ್ಮ ಪ್ರೀತಿ ಪ್ರದರ್ಶನಕ್ಕಿದು ಸಕಾಲ: ಹೆಚ್‌ಡಿಕೆ

ಒಕ್ಕಲಿಗ ಪ್ರೀತಿಯ ಪರಾಕಾಷ್ಠೆ ಈಗೀಗ ಅರ್ಥವಾಗಿದೆ ಎಂದು ಭಾವಿಸುತ್ತೇನೆ. ಅವರೆಲ್ಲರ ಮಾನಸಿಕ ಸ್ವಾಸ್ಥ್ಯ ಸರಿ ಇದೆ ಎಂದು ನಾನಾದರೂ ನಂಬಿದ್ದೇನೆ ಎಂದು ಟೀಕಿಸಿದ್ದಾರೆ.

ಸಾಮಾಜಿಕ ನ್ಯಾಯದ ಸಂಹಾರಿಯೇ ಅದೇ ಸಾಮಾಜಿಕ ನ್ಯಾಯ ಬಗ್ಗೆ ಪದೇ ಪದೆ ಮಾತನಾಡುವುದು ಅಸಹ್ಯ ತರಿಸುತ್ತದೆ. ನಿಮ್ಮ ಸಾಮಾಜಿಕ ನ್ಯಾಯಕ್ಕೆ ಅಂತಃಕರಣವಿಲ್ಲ. ಇದ್ದಿದ್ದರೆ ನಿಮಗಿಂತ ಮೊದಲೇ ಮಲ್ಲಿಕಾರ್ಜುನ ಖರ್ಗೆ ಅವರು ಸಿಎಂ ಆಗಬೇಕಿತ್ತು. ಇದ್ದ ಪ್ರತಿಪಕ್ಷ ಸ್ಥಾನವನ್ನೂ ಕಿತ್ತುಕೊಂಡು ಅವರನ್ನು ಅತ್ಯಂತ ಅಪಮಾನಕರವಾಗಿ ದಿಲ್ಲಿಗೆ ಓಡಿಸಿದಿರಿ. ಇನ್ನೊಬ್ಬ ದಲಿತ ನಾಯಕ ಡಾ.ಜಿ.ಪರಮೇಶ್ವರ್ ಅವರನ್ನು ನಿಮ್ಮ ದಾರಿಗೆ ಅಡ್ಡ ಬರುತ್ತಾರೆಂದು ಚುನಾವಣೆ ಕಣದಲ್ಲೇ ಮುಗಿಸಿದಿರಿ, ನಿಮ್ಮನ್ನು ಕಾಂಗ್ರೆಸ್ಸಿ ಗೆ ಕರೆತಂದ ಹೆಚ್.ವಿಶ್ವನಾಥ್‌ರನ್ನು ಎಲ್ಲಿ ಇಟ್ಟಿದ್ದೀರಿ? ನೀವು ಸಿಎಂ ಪಟ್ಟಕ್ಕೆ ಏರಿ ಕೂತಿರಿ? ಎರಡು ಸಲ ನೀವು ಸಿಎಂ ಆಗಿದ್ದಲ್ಲ, ಅರ್ಹತೆಯಿಂದ ಆಗಿದ್ದೂ ಅಲ್ಲವೇ ಅಲ್ಲ. ಪಕ್ಷದಲ್ಲಿದ್ದ ಸಮರ್ಥರನ್ನು ಸಾಮಾಜಿಕ ನ್ಯಾಯದ ನೆಪದಲ್ಲಿ ರಾಜಕೀಯ ನರಮೇಧ ಮಾಡಿ ಆಕ್ರಮಿಸಿದ್ದು ಎಂದು ಕುಮಾರಸ್ವಾಮಿ ಆರೋಪಿಸಿದ್ದಾರೆ.

ಇನ್ನೆಷ್ಟು ಸುಳ್ಳು ಹೇಳುತ್ತೀರಿ? ಇನ್ನೆಷ್ಟು ದಿನ ಈ ಊಸರವಳ್ಳಿ ಅವತಾರ? ಅಸಲಿಗೆ ಅಹಿಂದ ನಾಯಕ, ಸಾಮಾಜಿಕ ನ್ಯಾಯದ ಪ್ರತಿನಿಧಿಯೇ ನೀವಾಗಿದ್ದಿದ್ದರೆ ಈ ಸೂಕ್ಷ್ಮ ಸಂದರ್ಭದಲ್ಲಿ ನೀವು ಹುಟ್ಟಿದ ಜಾತಿಯನ್ನು ಎಳೆದು ತರುತ್ತಿರಲಿಲ್ಲ. ಇದನ್ನೇ ನಾನು ಪ್ರಶ್ನಿಸಿದ್ದು. ಬಸವಣ್ಣ, ನಾರಾಯಣಗುರು, ಕುವೆಂಪು, ದೇವರಾಜ ಅರಸು ಅವರುಗಳ ವಿಚಾರ, ತತ್ವಾದರ್ಶಗಳನ್ನು ನಂಬಿದವನು ಎನ್ನುವ ನೀವು, ಇನ್ನು ಮುಂದೆ ಆ ಮಹನೀಯರ ಹೆಸರೇಳಬೇಡಿ. ನಿಮಗಿಂತ ವಯಸ್ಸಿ ನಲ್ಲಿ ಚಿಕ್ಕವನಾದ ನಾನು ನಿಮಗೆ ನೀಡುವ ವಿನಮ್ರ ಸಲಹೆ ಇದು ಎಂದು ಟಾಂಗ್ ನೀಡಿದ್ದಾರೆ.

ಇಕೋ ಕ್ಲಬ್ ವತಿಯಿಂದ ವನಭೇಟಿ...
ಪರಿಸರ ಉಳಿದರೆ ಮಾತ್ರ ಮನುಕುಲದ ಉಳಿವು: ಡಾ.ಎರ್ರಿಸ್ವಾಮಿ ಅಭಿಮತ

ಲೆಗಳಿಂದ ಬಳಲಿ ಸಾವನ್ನಪ್ಪಿದ್ದಾರೆ. ಅನೇಕರು ಇನ್ನು ಸಹ ಅನೇಕ ಕಾಯಿಲೆಗಳಿಂದ ಬಳಲುತ್ತಿದ್ದಾರೆ. ಆದ್ದರಿಂದ ಇಂದಿನ ಯುವಕರು ಮತ್ತು ವಿದ್ಯಾರ್ಥಿಗಳು ಪರಿಸರವನ್ನು ಸುಸ್ಥಿರಗೊಳಿಸುವಲ್ಲಿ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಹೇಳು ತ್ತಾ, ಕೇಂದ್ರ ಮತ್ತು ರಾಜ್ಯ ಸರ್ಕಾ ರದ ವಿವಿಧ ಇಲಾಖೆಗಳ ನೇಮ ಕಾತಿಗಳಿಗೆ ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಈ ಕೇಂದ್ರದಲ್ಲಿ ಉಚಿತವಾಗಿ ತರಬೇತಿಯನ್ನು ನೀಡಲಾಗುತ್ತಿದೆ. ಇದರ ಸೌಲಭ್ಯವನ್ನು ಪ್ರತಿಯೊಬ್ಬರೂ ಪಡೆದುಕೊಳ್ಳಬೇಕು ಎಂದರು.

ಕಲಮಂಗಿ ಶಾಲೆಯ ಆಂಗ್ಲ ಭಾಷಾ ಶಿಕ್ಷಕರಾದ ವೀರೇಶ ಗೋನವಾರ ಅವರು ಮಾತನಾಡುತ್ತಾ, ಪ್ರಸ್ತುತ ವರ್ಷದಲ್ಲಿ ಇಕೋ ಕ್ಲಬ್ ಅಡಿಯಲ್ಲಿ ಕಾರ್ಯನಿರ್ವಹಿಸಲು ಅತ್ಯುತ್ತಮ ಅನೇಕ ಕಾರ್ಯಚಟುವಟಿಕೆಗಳನ್ನು ನೀಡಲಾಗಿದೆ. ವಿದ್ಯಾರ್ಥಿಗಳು ಇವುಗಳ ಸದುಯೋಗವನ್ನು ಪಡೆದುಕೊಳ್ಳಬೇಕು. ನಾಳೆಯ ದಿನಗಳಿಗೆ ಇಂದಿನಿಂದಲೇ ಪರಿಸರವನ್ನು ಚೊಕ್ಕಟವಾಗಿ ಇಟ್ಟುಕೊಳ್ಳಬೇಕು. ಮಾನವನ ದುರಾಶೆ ಮತ್ತು ಅವೈಜ್ಞಾನಿಕ ಆಲೋಚನೆ, ಯೋಜನೆಗಳಿಂದ ಪರಿಸರನ್ನು ಹಾಳು ಮಾಡುತ್ತಿದ್ದೇವೆ. ಇದನ್ನು ಪ್ರತಿಯೊಬ್ಬರೂ ಅರ್ಥಮಾಡಿಕೊಂಡು ಪರಿಸರದ ಸಂರಕ್ಷಣೆಯಲ್ಲಿ ಮುಂದಾಗಬೇಕೆಂದು. ಈ ಬುದ್ಧವಿಹಾರದ ಪರಿಸರವನ್ನು ತುಂಬಾ ಅಚ್ಚುಕಟ್ಟಾಗಿ ನಿರ್ವಹಿಸಿದ್ದಾರೆ. ಈ ಭಾಗದಲ್ಲಿ ಓದು ಮತ್ತು ತರಬೇತಿಗೆ ಹೇಳಿಮಾಡಿಸಿದ ಸ್ಥಳವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕಲಮಂಗಿ ಪ್ರೌಢಶಾಲೆಯ ಮುಖ್ಯಗುರು ಮಲ್ಲಪ್ಪ ಬಾದರ್ಲಿ, ವೀರಾಪುರ ಪ್ರೌಢಶಾಲೆಯ ಮುಖ್ಯಗುರು ಬಸವರಾಜ ಹುಡೇದ, ಶಿಕ್ಷಕರಾದ ರವಿಚಂದ್ರ, ಬಸವರಾಜ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಸನ್ಮಾನ: ಈ ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಿದ ಸ್ಪರ್ಧಾತ್ಮಕ ಪರೀಕ್ಷೆಗಳ ಉಚಿತ ತರಬೇತಿ ಕೇಂದ್ರದ ಸಂಪನ್ಮೂಲ ವ್ಯಕ್ತಿಗಳಾದ ಡಾ.ಎರ್ರಿಸ್ವಾಮಿ ಇವರನ್ನು ಆತ್ಮೀಯವಾಗಿ ಗೌರವಿಸಿ ಸನ್ಮಾಸಿಲಾಯಿತು.

ವೀಕ್ಷಣೆ-ಮಾಹಿತಿ: ಬುದ್ಧ ವಿಹಾರ ಕ್ಯಾಂಪಸ್‌ನಲ್ಲಿ ಬೆಳೆದಿರುವ ಸಪೋಟಾ, ನೇರಳೆ, ಮಾವು, ಬೇವು, ಕರಿಬೇವು, ಸೀತಾಫಲ, ಅಂಜೂರ, ತೆಂಗು, ಅರಳಿಮರ, ಬಸಿರುಗಿಡ, ವಿವಿಧ ಅಲಂಕಾರಿಕ ಸಸ್ಯಗಳು ಸೇರಿದಂತೆ 120ಕ್ಕೂ ಹೆಚ್ಚಿನ

ಯರಗೇರ ಗ್ರಾಮದಲ್ಲಿ ಸಂಜೀವಿನಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಯಶಸ್ವಿ: 282 ಜನರಿಗೆ ವೈದ್ಯಕೀಯ ಸೇವೆ

ವಿದ್ಯಾರ್ಥಿಗಳಿಗೆ ವಿಶೇಷ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿ ಕೊಳ್ಳುವ ಮೂಲಕ ಆರೋಗ್ಯವಂತ ಸಮಾಜದ ಬಗ್ಗೆ ಅರಿವು ಮೂಡಿಸಲಾಯಿತು.

ಶಿಬಿರದಲ್ಲಿ ನವೋದಯ ದಂತ ವೈದ್ಯಕೀಯ ಕಾಲೇಜು, ದೃಷ್ಟಿ ಕಣ್ಣಿನ ಆಸ್ಪತ್ರೆ, ಹೆಲ್ಪ್ ಏಜ್ ಇಂಡಿಯಾ, ಆಯುಷ್ಮಾನ್ ಭಾರತ್ ಹಾಗೂ ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ರಿಮ್ಸ್) ಆಸ್ಪತ್ರೆಯ ತಂಬಾಕು ನಿಯಂತ್ರಣ ಕೋಶ, ಅಸಾಂಕ್ರಮಿಕ ಕಾಯಿಲೆ ನಿಯಂತ್ರಣ ಘಟಕ ಮತ್ತು ಮಾನಸಿಕ ಆರೋಗ್ಯ ಚಿಕಿತ್ಸಾ ಘಟಕದ ತಜ್ಞ ವೈದ್ಯರು ಪಾಲ್ಗೊಂಡು ಸಾರ್ವಜನಿಕರಿಗೆ ತಪಾಸಣೆ ನಡೆಸಿ ಸೂಕ್ತ ಮಾರ್ಗದರ್ಶನ ನೀಡಿದರು.

ಕಾರ್ಯಕ್ರಮದಲ್ಲಿ ಯರಗೇರ ಸರ್ಕಾರಿ ಪ್ರೌಢಶಾಲೆಯ ಮುಖ್ಯ ಶಿಕ್ಷಕಿ ಶ್ರೀಮತಿ ಬಸವರಾಜೇಶ್ವರಿ ಹಾಗೂ ಶಾಲೆಯ ಶಿಕ್ಷಕ ವೃಂದದವರು ಭಾಗವಹಿಸಿದ್ದರು. ಸಮಾಜಕಾರ್ಯ ವಿಭಾಗದ ಸಂಯೋಜಕರಾದ ಡಾ. ಶರಣಬಸವರಾಜ, ಶಿಬಿರದ ನಿರ್ದೇಶಕಿ ಡಾ. ರಶ್ಮಿರಾಣಿ ಅಗ್ನಿಹೋತ್ರಿ ಮತ್ತು ಶ್ರೀ ಸುನೀಲ್ ಕುಮಾರ್ ಉಪಸ್ಥಿತರಿದ್ದರು. ಶ್ರೀ ಬಜರಪ್ಪ ಕಾರ್ಯಕ್ರಮ ನಿರ್ವಹಿಸಿದರು. ಸಮಾಜಕಾರ್ಯ ವಿಭಾಗದ ವಿದ್ಯಾರ್ಥಿಗಳ ಶಿಸ್ತುಬದ್ಧ ಸಂಘಟನೆ ಮತ್ತು ತಂಡದ ಕಾರ್ಯವೈಖರಿಯಿಂದ ಶಿಬಿರವು ಅತ್ಯಂತ ವ್ಯವಸ್ಥಿತವಾಗಿ ನೆರವೇರಿತು. ಭವಿಷ್ಯದಲ್ಲಿಯೂ ಇಂತಹ ಜನಪರ ಕಾರ್ಯಕ್ರಮಗಳನ್ನು ನಿರಂತರವಾಗಿ ಆಯೋಜಿಸುವುದಾಗಿ ವಿಭಾಗದ ಪ್ರಕಟಣೆ ತಿಳಿಸಿದೆ.

ವಾಲ್ಮೀಕಿ ಪೀಠದ ಗುರುಗಳ ಆರೋಗ್ಯ ವಿಚಾರಿಸಿದ ಶ್ರೀದೇವಿ ನಾಯಕ

ಲಘು ಹೃದಯಾಘಾತ ಉಂಟಾಗಿದ್ದರಿಂದ ತಕ್ಷಣವೇ ಅವರನ್ನು ರಾಯಚೂರಿನ ವಿಜಿ ಕುಲಕರ್ಣಿ ಹೃದಯ ಆಸ್ಪತ್ರೆಗೆ ಎಸ್ಮಾರ್ಟ್ ಪ್ರಸನ್ನಾನಂದಪುರಿ ಸ್ವಾಮೀಜಿಆಸ್ಪತ್ರೆಗೆ ದಾಖಲು ಸಹಾಯದೊಂದಿಗೆ ರಾತ್ರಿ 9 ಗಂಟೆ ವೇಳೆ ಸಮಯದಲ್ಲಿ ಆಗಮಿಸಿ ಸೇರಿಸಲಾಗಿತ್ತು. ಈ ನಿಟ್ಟಿನಲ್ಲಿ ಇಂದು ಹೈದ್ರಾಬಾದ್ ಆಸ್ಪತ್ರೆಗೆ ತೆರಳಿ ಅವರ ಆರೋಗ್ಯ ವಿಚಾರಿಸಿದರು ಈ ವೇಳೆಯಲ್ಲಿ ಸುರೇಶ್ ನಾಯಕ್ ಇನ್ನು ಪ್ರಮುಖರು ಭಾಗಿಯಾಗಿದ್ದರು.

ಶೇ.99 ರಷ್ಟು ಕಠಿಣ ಪರಿಶ್ರಮದಿಂದ ಸಾಧನೆ ಕಟ್ಟಿಟ್ಟ ಬುತ್ತಿ-ನ್ಯಾ.ರಾಜೇಶ್ ಎನ್.ಹೊಸಮನೆ



ಬಳ್ಳಾರಿ,ಫೆ.22-

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಶೇ.99 ರಷ್ಟು ಕಠಿಣ ಪರಿಶ್ರಮ, ಕೇವಲ ಶೇ.01 ರಷ್ಟು ಅದೃಷ್ಟದಿಂದ ಮಾತ್ರ ಏನನ್ನಾದರೂ ಸಾಧಿಸಲು ಸಾಧ್ಯ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಧೀಶರಾದ ರಾಜೇಶ್ ಎನ್. ಹೊಸಮನೆ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಜಿಪಂ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಬಳ್ಳಾರಿ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ನಿಲಯಾರ್ಥಿಗಳಿಗೆ ಶನಿವಾರ ಹಮ್ಮಿಕೊಂಡಿದ್ದ ಸ್ಪರ್ಧಾತ್ಮಕ ಪರೀಕ್ಷೆ ಹಾಗೂ ವೃತ್ತಿ ಮಾರ್ಗದರ್ಶನ ಕುರಿತು ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಸ್ಪರ್ಧಾತ್ಮಕ ಯುಗದಲ್ಲಿ ಶಾರೀರಿಕ, ಮಾನಸಿಕವಾಗಿ ಸದೃಢರಾಗುವ ಮೂಲಕ ಸತತ ಪರಿಶ್ರಮದಿಂದ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಧೈರ್ಯದಿಂದ ಎದುರಿಸಬೇಕು ಎಂದು ತಿಳಿಸಿದರು.

ವಿದ್ಯಾರ್ಥಿ ಜೀವನದಲ್ಲಿ ಸಮಯ ಅಮೂಲ್ಯವಾಗಿದ್ದು, ಶಾಲಾ-ಕಾಲೇಜು ಮುಗಿದ ನಂತರವೇ ನಿಜವಾದ ಜೀವನ ಆರಂಭಗೊಳ್ಳುತ್ತದೆ. ಸಾಧಕರ ಜೀವನ ಶೈಲಿಗಳ ಮೂಲಕ ಪ್ರೇರಿತರಾಗಿ, ಸಿಗುವ ಅವಕಾಶಗಳನ್ನು ಬಳಸಿಕೊಂಡು ಸಾಧಕರಾಗಬೇಕು ಎಂದು ಕಿವಿಮಾತು ಹೇಳಿದರು.

ನಿಲಯ ವಿದ್ಯಾರ್ಥಿಗಳಿಗೆ ಸಾಕಷ್ಟು ಸಮಯಾವಕಾಶ ಸಿಗಲಿದೆ. ಪಠ್ಯದ ಜೊತೆಗೆ ಸರ್ಕಾರಿ ಹುದ್ದೆಗಳ ನಿರ್ದಿಷ್ಟ ಪಠ್ಯಕ್ರಮಗಳ ಅಧ್ಯಯನ, ಗುಂಪು ಚರ್ಚೆ ಹಾಗೂ ಇತರೆ ಅಧ್ಯಯನ ನಡೆಸಬೇಕು ಎಂದರು.

ಪದವಿ ನಂತರ ಸಾಕಷ್ಟು ಅವಕಾಶದ ಬಾಗಿಲು ತೆರೆಯುತ್ತವೆ. ಒಳ್ಳೆಯದನ್ನೇ ಆಯ್ಕೆ ಮಾಡಿಕೊಂಡು ಅವಕಾಶ ಉಪಯೋಗಿಸಿಕೊಳ್ಳಬೇಕು. ಕೇವಲ ಹಣ ಮಾಡಲು ಸರ್ಕಾರಿ ಹುದ್ದೆ ಪಡೆಯಬಾರದು ಸಾಮಾಜಿಕ ಸೇವೆ, ದೇಶಕ್ಕೆ ಕೊಡುಗೆ ನೀಡಬೇಕೆಂಬ ಪ್ರಾಮಾಣಿಕತೆ, ಸ್ಥಿರತೆ ಹೊಂದಬೇಕು ಎಂದರು.

ಜಿಲ್ಲಾ ಪಂಚಾಯತ್ ಉಪಕಾರ್ಯ ದರ್ಶಿ ಶಶಿಕಾಂತ್ ಶಿವಪುರೆ ಅವರು ಮಾತನಾಡಿ, ಜೀವನವೇ ಒಂದು ಸ್ಪರ್ಧೆ. ಆ ಸ್ಪರ್ಧೆಯಲ್ಲಿ ನಾವೆಲ್ಲಾ ಸ್ಪರ್ಧಾ ಆಕಾಂಕ್ಷಿಗಳು. ಜೀವನದಲ್ಲಿ ನಾವು ಏನಾಗಬೇಕು ಎಂಬುದನ್ನು ನಮ್ಮ ಸಾಮರ್ಥ್ಯದ ಮೂಲಕ ದೃಢ ನಿರ್ಧಾರದೊಂದಿಗೆ ಶ್ರದ್ಧೆಯಿಂದ ಅಭ್ಯಾಸ ಮಾಡಿದಾಗ ಮಾತ್ರ ಏನಾದರೂ ಸಾಧನೆ ಮಾಡಲು ಸಾಧ್ಯ ಎಂದು ಹೇಳಿದರು.

ವಿದ್ಯಾರ್ಥಿ ಜೀವನದಲ್ಲಿ ಕಠಿಣ ಪರಿಶ್ರಮದ ಮೂಲಕ ಕಷ್ಟದ ದಿನಗಳನ್ನು ಎದುರಿಸಿದಾಗ ಮಾತ್ರ ಮುಂದೆ ಒಳ್ಳೆಯ ಸುಖದ ದಿನಗಳನ್ನು ಪಡೆಯಲು ಸಾಧ್ಯವಾಗಲಿದೆ ಎಂದು ತಿಳಿಸಿದರು.

ಶ್ರೀ ಮೇಧಾ ಡಿಗ್ರಿ ಕಾಲೇಜಿನ ಬಿಸಿಎ ವಿಭಾಗದ ಮುಖ್ಯಸ್ಥ ಹಾಗೂ ಜೆಸಿಐ ಇಂಡಿಯಾದ ರಾಷ್ಟ್ರೀಯ ತರಬೇತುದಾರ, ಮಕ್ಕಳ ಸಲಹೆಗಾರ ಜೆ.ಸಿ.ಮಂಜುನಾಥ ಬಳ್ಳೂಳ್ಳಿ, ಬಳ್ಳಾರಿಯ ಭೀಮರಾವ್ ಐ.ಎ.ಎಸ್ ಮತ್ತು ಕೆ.ಎ.ಎಸ್ ಸ್ಟಡಿ ಸರ್ಕಲ್ ನ ನಿರ್ದೇಶಕ ಶೇಖರಪ್ಪ ಮತ್ತು ಸಂಡೂರು ಎಸ್.ಇ.ಎಸ್ ಶಿಕ್ಷಣ ಸಂಸ್ಥೆಯ ಡಾ.ಜಗದೀಶ್ ಬಸಾಪುರ ಅವರು ಸ್ಪರ್ಧಾತ್ಮಕ ಪರೀಕ್ಷೆ ಕುರಿತು ವಿಶೇಷ ಉಪನ್ಯಾಸ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ವಿನೋದ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಜಲಾಲಪ್ಪ ಎ.ಕೆ ಸೇರಿದಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ- ಸಿಬ್ಬಂದಿ, ನಿಲಯ ವಿದ್ಯಾರ್ಥಿಗಳು ಇತರರು ಉಪಸ್ಥಿತರಿದ್ದರು.

ಪರೀಕ್ಷಾ ಕೇಂದ್ರಗಳ 200 ಮೀ. ವ್ಯಾಪ್ತಿ ಸುತ್ತ-ಮುತ್ತ ನಿರ್ಬಂಧ



ಬಳ್ಳಾರಿ,ಫೆ.22-

ನಗರದ 11 ಪರೀಕ್ಷಾ ಕೇಂದ್ರಗಳಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಫೆ.22 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 12.30 ರವರೆಗೆ (ಪತ್ರಿಕೆ-01) ಹಾಗೂ ಮಧ್ಯಾಹ್ನ 02.30 ರಿಂದ ಸಂಜೆ 04.30 ರವರೆಗೆ (ಪತ್ರಿಕೆ-02) ಕಲ್ಯಾಣ ಕರ್ನಾಟಕ ವೃಂದದ

ವಿವಿಧ ಸಂಸ್ಥೆಗಳಲ್ಲಿ ಖಾಲಿ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳು ನಡೆಯಲಿದ್ದು, ಪರೀಕ್ಷಾ ಕೇಂದ್ರದ ಸುತ್ತಲಿನ 200 ಮೀಟರ್ ವ್ಯಾಪ್ತಿಯ ಪ್ರದೇಶವನ್ನು ಭಾರತೀಯ ನಾಗರೀಕ ಸುರಕ್ಷಾ ಸಂಹಿತಾ 2023 ರ ಕಲಂ 163 ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ನಿರ್ಭಂಧಿತ ಪ್ರದೇಶ ಎಂದು ಘೋಷಿಸಿ ಜಿಲ್ಲಾ ದಂಡಾಧಿಕಾರಿಯೂ ಆದ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಆದೇಶಿಸಿದ್ದಾರೆ.

ಪರೀಕ್ಷಾ ಕೇಂದ್ರಗಳ ಸುತ್ತಲೂ ಇರುವ ಜೆರಾಕ್ಸ್ ಸೆಂಟರ್ ಮತ್ತು ಇಂಟರ್‌ನೆಟ್ ಸೆಂಟರ್‌ಗಳನ್ನು ಕಾರ್ಯನಿರ್ವಹಿಸದಂತೆ ಪ್ರತಿಬಂಧಿಸಲು ಆದೇಶಿಸಿದ್ದು, ಆ ಪ್ರದೇಶದಲ್ಲಿ ಅನಧಿಕೃತ ವ್ಯಕ್ತಿ ಮತ್ತು ವ್ಯಕ್ತಿಗಳ ಗುಂಪುಗಳಿಗೆ ಪ್ರವೇಶ ನಿಷೇಧಿಸಲಾಗಿದೆ.

ಈ ಆದೇಶವು ಪರೀಕ್ಷೆಯ ವೀಕ್ಷಕರು, ಕಾರ್ಯನಿರ್ವಹಿಸುವ ಸಿಬ್ಬಂದಿಯವರಿಗೆ ಅನ್ವಯಿಸುವುದಿಲ್ಲ ಎಂದು ಅವರು ಹೊರಡಿಸಿರುವ ಆದೇಶದಲ್ಲಿ ತಿಳಿಸಿದ್ದಾರೆ.

ಫೆ.24 ರಂದು ಕನಕದುರ್ಗಮ್ಮ ಸಿಡಿಬಂಡಿ ರಥೋತ್ಸವ: ವಿವಿಧೆಡೆ ಪಾರ್ಕಿಂಗ್ ವ್ಯವಸ್ಥೆ



ಬಳ್ಳಾರಿ,ಫೆ.22-

ಇದೇ ಫೆ.24 ರಂದು ಬಳ್ಳಾರಿ ನಗರದ ಶ್ರೀ ಕನಕ ದುರ್ಗಮ್ಮ ಸಿಡಿಬಂಡಿ ರಥೋತ್ಸವ ಜರುಗಲಿದ್ದು, ರಥೋತ್ಸವ ವೀಕ್ಷಿಸಲು ಆಗಮಿಸುವ ಸಾರ್ವಜನಿಕರಿಗೆ ನಗರದ ವಿವಿಧೆಡೆ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ.ಪನ್ನೇಕರ್ ಅವರು ತಿಳಿಸಿದ್ದಾರೆ.

ಮೋಕ ಭಾಗದಿಂದ ರಥೋತ್ಸವಕ್ಕೆ ಆಗಮಿಸುವ ಸಾರ್ವಜನಿಕ ವಾಹನಗಳಿಗೆ ಗಾಂಧಿನಗರ 1ನೇ ಕ್ರಾಸ್ ಹತ್ತಿರವಿರುವ ಅಲ್ಲಂ ಸುಮಂಗಳಮ್ಮ ಕಾಲೇಜು ಆವರಣದಲ್ಲಿ, ಕಪ್ಪಗಲ್ ಕಡೆಯಿಂದ ರಥೋತ್ಸವಕ್ಕೆ ಆಗಮಿಸುವ ಸಾರ್ವಜನಿಕ ವಾಹನಗಳಿಗೆ ಕಪ್ಪಗಲ್ ರಸ್ತೆಯಲ್ಲಿರುವ ಕಿತ್ತೂರುರಾಣಿ ಚೆನ್ನಮ್ಮ ಶಾಲೆಯ ಆವರಣದಲ್ಲಿ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ.

ಸಿರುಗುಪ್ಪ ಹಾಗೂ ಹೊಸಪೇಟೆ ಭಾಗದಿಂದ ರಥೋತ್ಸವಕ್ಕೆ ಆಗಮಿಸುವ ಸಾರ್ವಜನಿಕ ವಾಹನಗಳಿಗೆ ಬಸವ ಭವನ ಹಾಗೂ ಜಿಲ್ಲಾ ಕೇಂದ್ರ ಕಾರಾಗೃಹದ ಮುಂದಿನ ಖಾಲಿ ಜಾಗದಲ್ಲಿ, ಬೆಂಗಳೂರು ರಸ್ತೆ ಹಾಗೂ ಅನಂತಪುರ ಕಡೆಯಿಂದ ರಥೋತ್ಸವಕ್ಕೆ ಆಗಮಿಸುವ ಸಾರ್ವಜನಿಕ ವಾಹನಗಳಿಗೆ ಕಮ್ಮಾ ಭವನದ ಮುಂದಿನ ಖಾಲಿ ಜಾಗ ಹಾಗೂ ಮುನಿಸಿಪಲ್ ಕಾಲೇಜು ಅವರಣದಲ್ಲಿ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ.

ಬಳ್ಳಾರಿ ನಗರದ ಯು.ಬಿ ಸರ್ಕಲ್, ಜಿಲ್ಲಾ ಕೇಂದ್ರ ಕಾರಾಗೃಹದ ಗೇಟ್, ಜಿಮ್‌ಖಾನ ಕ್ರಾಸ್, ತಾಳೂರು ರಸ್ತೆಯ ಬಾಲಾಜಿ ನರ್ಸಿಂಗ್ ಹೋಂ ಕ್ರಾಸ್, ಕಪ್ಪಗಲ್ ರಸ್ತೆಯ ಸಂಜೀವಿನಿ ಅಸ್ಪತ್ರೆಯ ಕ್ರಾಸ್ ಹಾಗೂ ಮೋಕಾ ರಸ್ತೆಯ ಗಾಂಧಿನಗರ 1ನೇ ಕ್ರಾಸ್ ಗಳ ಮೂಲಕ ದುರ್ಗಮ್ಮ ಗುಡಿ ಸರ್ಕಲ್‌ಗೆ ಬರುವ ಎಲ್ಲಾ ರೀತಿಯ ವಾಹನಗಳ ಸಂಚಾರವನ್ನು ಸಂಪೂರ್ಣವಾಗಿ ನಿರ್ಬಂಧಿಸಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸರ್ಕಾರಿ ಶಾಲೆಗೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಭೇಟಿ



ಬೀದರ, ಫೆ..22- ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಶನಿವಾರದಂದು ಬೀದರ ಮೈಲೂರನಲ್ಲಿರುವ ಸರಕಾರಿ ಹಿರಿಯ ಪ್ರಾಥಮಿಕ ಮತ್ತು ಉರ್ದು ಶಾಲೆಗೆ ಭೇಟಿ ನೀಡಿ ವಿದ್ಯಾರ್ಥಿ ಗಳಿಗೆ ಪಾಠ ಮಾಡಿದರು. ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕಿಯರು ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಯಾದಗಿರಿನಲ್ಲಿ ಸಿಟಿ ಸ್ಕ್ಯಾನ್ ಸೇವೆ ಸ್ಥಗಿತ: ಆರೋಗ್ಯ ವ್ಯವಸ್ಥೆಗೆ ದೊಡ್ಡ ಹೊಡೆತ



ಯಾದಗಿರಿ, ಫೆ.22-

ನಗರದಲ್ಲಿನ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಸಿಟಿ ಸ್ಕ್ಯಾನ್ ಸೇವೆ ತಾತ್ಕಾಲಿಕವಾಗಿ ನಿಂತಿರುವುದು ಸಾರ್ವಜನಿಕ ಆರೋಗ್ಯ ಸೇವೆಗೆ ದೊಡ್ಡ ಹೊಡೆತವಾಗಿದೆ. ಸಿಬ್ಬಂದಿಗೆ ಸಂಬಳ ಪಾವತಿ ವಿಳಂಬವಾದ ಹಿನ್ನೆಲೆ ಸೇವೆ ಸ್ಥಗಿತಗೊಂಡಿದ್ದು, ಇದರ ಪರಿಣಾಮವಾಗಿ ನೂರಾರು ರೋಗಿಗಳು ಸಂಕಷ್ಟಕ್ಕೆ ಸಿಲುಕಿದ್ದಾರೆ.

ಗ್ರಾಮೀಣ ಜನರಿಗೆ ತೊಂದರೆ

ಜಿಲ್ಲೆಯ ವಿವಿಧ ಹಳ್ಳಿಗಳಿಂದ ದಿನನಿತ್ಯ ಆಸ್ಪತ್ರೆಗೆ ಆಗಮಿಸುವ ರೋಗಿಗಳಿಗೆ ಸಿಟಿ ಸ್ಕ್ಯಾನ್ ಅತ್ಯಂತ ಅಗತ್ಯ ಸೇವೆಯಾಗಿತ್ತು. ಕಡಿಮೆ ವೆಚ್ಚದಲ್ಲಿ ಪರೀಕ್ಷೆ ಲಭ್ಯವಾಗುತ್ತಿದ್ದುದರಿಂದ ಬಡ ಕುಟುಂಬಗಳಿಗೆ ಇದು ದೊಡ್ಡ ಆಧಾರವಾಗಿತ್ತು. ಈಗ ಸೇವೆ ಸ್ಥಗಿತಗೊಂಡಿರುವುದರಿಂದ ಅವರು ಪರ್ಯಾಯ ವ್ಯವಸ್ಥೆಗಾಗಿ ಅಲೆದಾಡುತ್ತಿದ್ದಾರೆ.

ತುರ್ತು ಚಿಕಿತ್ಸೆಗೆ ಅಡ್ಡಿ

ಅಪಘಾತಗಳು, ತಲೆಗಾಯಗಳು, ಮೆದುಳಿನ ಸಮಸ್ಯೆಗಳು ಸೇರಿದಂತೆ ಹಲವು ತುರ್ತು ಪರಿಸ್ಥಿತಿಗಳಲ್ಲಿ ಸಿಟಿ ಸ್ಕ್ಯಾನ್ ತಕ್ಷಣ ಅಗತ್ಯವಾಗುತ್ತದೆ. ಆದರೆ ಈಗ ಈ ಪರೀಕ್ಷೆ ಲಭ್ಯವಿಲ್ಲದ ಕಾರಣ ತುರ್ತು ರೋಗಿಗಳನ್ನು ಖಾಸಗಿ ಆಸ್ಪತ್ರೆಗಳತ್ತ ಕಳುಹಿಸಲಾಗುತ್ತಿದೆ. ಇದರಿಂದ ಚಿಕಿತ್ಸೆ ವಿಳಂಬವಾಗುವ ಆತಂಕವೂ ವ್ಯಕ್ತವಾಗಿದೆ.

ಖಾಲಿಯಾದ ವಿಭಾಗ ನಿರಾಶರಾದ ರೋಗಿಗಳು

ಹಿಂದೆ ಜನರಿಂದ ಕಿಕ್ಕಿರಿದಿದ್ದ ಸಿಟಿ ಸ್ಕ್ಯಾನ್ ವಿಭಾಗ ಇದೀಗ ಬಿಕೋ ಎನ್ನುತ್ತಿದೆ. ನಿರೀಕ್ಷಣಾ ಕೋಣೆಯಲ್ಲಿ ಖಾಲಿ ಕುರ್ಚಿಗಳು, ಬಂದವರ ಮುಖದಲ್ಲಿ ನಿರಾಸೆ ಇವೆಲ್ಲವೂ ಸಮಸ್ಯೆಯ ಗಂಭೀರತೆಯನ್ನು ತೋರಿಸುತ್ತಿವೆ.

ತಕ್ಷಣ ಪರಿಹಾರಕ್ಕೆ ಒತ್ತಾಯ

ಸಂಬಳ ಸಮಸ್ಯೆಯಿಂದ ಆರಂಭವಾದ ವಿವಾದವು ಇದೀಗ ಸಾರ್ವಜನಿಕ ಆರೋಗ್ಯದ ಮೇಲೆ ನೇರ ಪರಿಣಾಮ ಬೀರುತ್ತಿದೆ. ಸಂಬಂಧಿತ ಅಧಿಕಾರಿಗಳು ತ್ವರಿತವಾಗಿ ಮಧ್ಯಪ್ರವೇಶಿಸಿ ಸಮಸ್ಯೆ ಬಗೆಹರಿಸಿ ಸಿಟಿ ಸ್ಕ್ಯಾನ್ ಸೇವೆಯನ್ನು ಶೀಘ್ರ ಪುನರಾರಂಭಿಸಬೇಕು ಎಂಬುದು ಸಾರ್ವಜನಿಕರ ಆಗ್ರಹವಾಗಿದೆ.

ಬೊಮ್ಮನಹಳ್ಳಿ ಪಿಕೆಪಿಎಸ್ ಗೆ ಸಿದ್ದಪ್ಪ ಕಟ್ಟಿಮನಿ ಆಯ್ಕೆ ವಿಜಯೋತ್ಸವ



ತಾಳಿಕೋಟಿ,ಫೆ.22-

ತಾಲೂಕಿನ ಬೊಮ್ಮನಹಳ್ಳಿ ಗ್ರಾಮದ ವಿವಿದೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘ ಇದರ 12 ಸ್ಥಾನಗಳ ಪೈಕಿ 11 ಸ್ಥಾನಗಳು ಅವಿರೋಧವಾಗಿ ಆಯ್ಕೆಯಾಗಿದ್ದವು ಹಿಂದುಳಿದ ವರ್ಗ ಅ ಒಂದು ಸ್ಥಾನಕ್ಕೆ ಫೆಬ್ರವರಿ 22ರಂದು ನಡೆದ ಚುನಾವಣೆಯಲ್ಲಿ ಬೊಮ್ಮನಹಳ್ಳಿ ಗ್ರಾಮದ ಸಿದ್ದಪ್ಪ ಬಸಪ್ಪ ಕಟ್ಟಿಮನಿ ಇವರು ತಮ್ಮ ಪ್ರತಿಸ್ಪರ್ಧಿ ಖ್ಯಾತನಾಳ ಗ್ರಾಮದ ಮಾಳಪ್ಪ ಸಿದ್ದಪ್ಪ ಕಾಳಗಿ ಇವರನ್ನು 50 ಮತಗಳ ಅಂತರದಿಂದ ಸೋಲಿಸಿ ಆಯ್ಕೆಯಾದರು. ಒಟ್ಟು ಚಲಾವಣೆ ಆದ 243 ಮತಗಳಲ್ಲಿ ಮೂರು ಮತಗಳು ತಿರಸ್ಕೃತಗೊಂಡು ಅದರಲ್ಲಿ ಕಟ್ಟಿಮನಿಯವರಿಗೆ 145 ಮತಗಳು ಹಾಗೂ ಅವರ ಪ್ರತಿಸ್ಪರ್ಧಿ ಅಭ್ಯರ್ಥಿಯಾದ ಮಾಳಪ್ಪ ಸಿದ್ದಪ್ಪ ಕಾಳಗಿ ಇವರಿಗೆ 95 ಮತಗಳು ಬಂದವು. ಚುನಾವಣಾ ಅಧಿಕಾರಿಗಳಾದ ವಿಜಯಕುಮಾರ್ ಉತ್ನಾಳ ಅವರು ಫಲಿತಾಂಶ ಘೋಷಿಸಿದರು. ಸಂಘದ ಮುಖ್ಯ ಮುಖ್ಯ ಕಾರ್ಯನಿರ್ವಾಹಕ ಎಸ್.ಬಿ. ಬಿರಾದಾರ ಹಾಗೂ ಸಿಬ್ಬಂದಿಗಳು ಚುನಾವಣಾ ಪ್ರಕ್ರಿಯೆಯನ್ನು ನೀಯಮಾನುಸಾರ ಶಿಸ್ತು ಬದ್ಧವಾಗಿ ನಿರ್ವಹಿಸಿದರು. ನಂತರ ಮುಖಂಡ ಮಡುಸೌಕಾರ ಬಿರಾದಾರ ಇವರ ನೇತೃತ್ವದಲ್ಲಿ ನಡೆದ ವಿಜಯೋತ್ಸವದಲ್ಲಿ ಬೆಂಬಲಿಗರು ಅಭಿಮಾನಿಗಳು ಪಟಾಕಿ ಸಿಡಿಸಿ ಗುಲಾಲು ಎರಚಿ ಸಿಹಿ ವಿತರಸಿ ಸಂಭ್ರಮಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಮುಖಂಡ ಮಡುಸೌಕಾರ ಅವರು ಮತದಾರ ಬಾಂಧವರ ಸಹಕಾರದಿಂದ ಇಂದು ನಮಗೆ ವಿಜಯ ಲಭಿಸಿದೆ ನಾನು ಅವರನ್ನು ಅಭಿನಂದಿಸುತ್ತೇನೆ ಮುಂದಿನ ದಿನಗಳಲ್ಲಿ ನಾವೆಲ್ಲರೂ ಒಂದಾಗಿ ಸಂಘದ ಅಭಿವೃದ್ಧಿಗಾಗಿ ಒಗ್ಗಟ್ಟಿನಿಂದ ಕೆಲಸ ಮಾಡುತ್ತೇವೆ ಎಂದರು. ಈ ಸಂದರ್ಭದಲ್ಲಿ ಹಲವಾರು ಮುಖಂಡರು ಹಾಗೂ ಅಭಿಮಾನಿಗಳು ಉಪಸ್ಥಿತರಿದ್ದರು.

ಗಂಗಾ ಕಲ್ಯಾಣ ಯೋಜನೆ ಫಲಾನುಭವಿಗಳಿಗೆ ಮೋಟಾರು, ಸಲಕರಣೆ ವಿತರಣೆ



ಔರಾದ(ಬಿ), ಫೆ.22-

ವಿಧಾನಸಭಾ ಕ್ಷೇತ್ರದಲ್ಲಿ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ವತಿಯಿಂದ ಗಂಗಾ ಕಲ್ಯಾಣ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳಿಗೆ ಮಾಜಿ ಸಚಿವರು ಹಾಗೂ ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಮೋಟಾರು ಸಲಕರಣೆಗಳನ್ನು ವಿತರಿಸಿದರು.

ಪಟ್ಟಣದ ಶಾಸಕರ ಕಛೇರಿ ಆವರಣದಲ್ಲಿ ಬುಧವಾರ ನಡೆದ ಕಾರ್ಯಕ್ರಮದಲ್ಲಿ ನಿಗಮದಡಿ ಆಯ್ಕೆಯಾದ 14 ಜನ ಫಲಾನುಭವಿಗಳಿಗೆ ಮೋಟಾರು, ಪೈಪು, ತಂತಿಗಳು ಸೇರಿದಂತೆ ಕೊಳವೆ ಬಾವಿಗೆ ಅಗತ್ಯವಿರುವ ಸಾಮುಗ್ರಿಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕರು, ಔರಾದ(ಬಿ) ವಿಧಾನಸಭಾ ಕ್ಷೇತ್ರದ ಸಮಗ್ರ ಅಭಿವೃದ್ಧಿಯ ಹಿತದೃಷ್ಟಿಯಿಂದ ನಿರಂತರ ಶ್ರಮಿಸುತ್ತಿದ್ದು, ಸರ್ಕಾರದ ಯೋಜನೆಗಳನ್ನು ಅರ್ಹರಿಗೆ ತಲುಪಿಸಬೇಕು. ವಿಶೇಷವಾಗಿ ರೈತರ ಕೈ ಬಲಪಡಿಸಬೇಕು ಎನ್ನುವ ಸದಾಶಯ ದೊಂದಿಗೆ ಕೆಲಸ ಮಾಡುತ್ತಿದ್ದೇನೆ. ಇಂತಹ ಯೋಜನೆಗಳು ರೈತರಿಗೆ ಅನುಕೂಲಕರವಾಗಿ ಪರಿಣಮಿಸಲಿವೆ ಎಂದರು.

ರೈತರು ಆರ್ಥಿಕವಾಗಿ ಸಬಲರಾಗ ಬೇಕು ಎಂಬ ಸದಾಶಯ ದೊಂದಿಗೆ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ. ಯೋಜನೆಯ ಸದುಪಯೋಗವನ್ನು ಪಡೆದು ಉತ್ತಮ ಕೃಷಿ ಬೆಳೆಗಳನ್ನು ಬೆಳೆಸಿ ಆರ್ಥಿಕವಾಗಿ ಸಬಲರಾಗಬೇಕೆಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ತಾಲ್ಲೂಕು ಅಭಿವೃದ್ಧಿ ಅಧಿಕಾರಿ ಸೋಮಶೇಖರ ಸೇರಿದಂತೆ ಸ್ಥಳೀಯ ಮುಖಂಡರು ಹಾಗೂ ಫಲಾನುಭವಿಗಳು ಉಪಸ್ಥಿತರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ವಿಜಯಪುರದಲ್ಲಿ ಜನತಾ ಸಮಾವೇಶ: ಜೆಡಿಎಸ್‌ನ ಹೊಸ ಅಧ್ಯಾಯಕ್ಕೆ ಸಾಕ್ಷಿಯಾಗುವುದೇ ಉತ್ತರ ಕರ್ನಾಟಕ?



ಜೆಡಿಎಸ್ ಸ್ಥಾಪನೆಯಾಗಿ 25 ವರ್ಷ ಪೂರ್ಣಗೊಂಡಿರುವ ಹಿನ್ನೆಲೆಯಲ್ಲಿ ಪಕ್ಷ ಬೆಳ್ಳಿ ಹಬ್ಬ ಆಚರಿಸುತ್ತಿದೆ. ಕಿತ್ತೂರು ಕರ್ನಾಟಕ ಜನತಾ ಸಮಾವೇಶದ ಮೂಲಕ ಉತ್ತರ ಕರ್ನಾಟಕದಲ್ಲಿ ಜೆಡಿಎಸ್ ಪಕ್ಷವನ್ನು ಪುನರುಜ್ಜೀವನಗೊಳಿಸಲು ಪ್ರಯತ್ನಿಸುತ್ತಿದೆ. ಅದರ ಸಲುವಾಗಿ ಮೊದಲ ಹಂತದ ಬೃಹತ್ ಜನತಾ ಸಮಾವೇಶವನ್ನು ವಿಜಯಪುರದಲ್ಲಿ ಫೆಬ್ರವರಿ 27ರಂದು ಹಮ್ಮಿಕೊಳ್ಳಲಾಗಿದೆ.

ಮೈಸೂರಿನಲ್ಲಿ ಆಚರಿಸಿದ ಮುಖ್ಯ ಬೆಳ್ಳಿ ಹಬ್ಬದ ನಂತರ ಈಗ ಉತ್ತರಕ್ಕೆ ವಿಸ್ತರಣೆಯಾಗಿದೆ. ಹಳೆ ಮೈಸೂರು ಭಾಗದ ಪಕ್ಷ ಎಂಬ ಅಣಕವನ್ನು ತೊಡೆದುಹಾಕಿ, ಕಿತ್ತೂರು ಕರ್ನಾಟಕದ 7 ಜಿಲ್ಲೆಗಳಲ್ಲಿ (ವಿಜಯಪುರ, ಬೆಳಗಾವಿ, ಬಾಗಲಕೋಟೆ, ಗದಗ, ಹಾವೇರಿ, ಧಾರವಾಡ, ಉತ್ತರ ಕನ್ನಡದ ಕೆಲವು ಭಾಗ) ಪಕ್ಷವನ್ನು ಬಲಪಡಿಸುವ ಗುರಿ ಹೊಂದಲಾಗಿದೆ.

ನಿಖಿಲ್ ಕುಮಾರಸ್ವಾಮಿ ನೇತೃತ್ವದ ಪೂರ್ವಸಿದ್ಧತೆ

ಎರಡು ದಶಕಗಳ ಹಿಂದೆ ಜೆಡಿಎಸ್‌ಗೆ ಉತ್ತರ ಕರ್ನಾಟಕದಲ್ಲಿ ನೆಲೆಯಿತ್ತು. ಆದರೆ ಇತ್ತೀಚಿನ ಚುನಾವಣೆಗಳಲ್ಲಿ ಹಿನ್ನಡೆ ಅನುಭವಿಸಿದೆ. ಹೀಗಾಗಿ ಉತ್ತರದಲ್ಲಿ ಪುನಃ ಪಕ್ಷವನ್ನು ಬಲಿಷ್ಠಗೊಳಿಸಲು ಮಾಜಿ ಪ್ರಧಾನಿ ಎಚ್ ಡಿ ದೇವೇಗೌಡ ಹಾಗೂ ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿಯವರು ಮುಂದಾಗಿದ್ದು, ಫೆ.27ರಂದು ವಿಜಯಪುರದಲ್ಲಿ ಕಿತ್ತೂರು ಕರ್ನಾಟಕ ಜಿಲ್ಲೆಗಳನ್ನು ಒಳಗೊಂಡ ಬೃಹತ್ ಜನತಾ ಸಮಾವೇಶ ಆಯೋಜನೆಗೆ ಸಿದ್ಧತೆ ನಡೆಸಿದ್ದಾರೆ.

ಫೆಬ್ರವರಿ 18ರಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ವಿಜಯಪುರಕ್ಕೆ ಭೇಟಿ ನೀಡಿ ಸಮಾವೇಶದ ಸ್ಥಳವನ್ನು ಖುದ್ದು ಪರಿಶೀಲಿಸಿದ್ದು, ಪೂರ್ವಭಾವಿ ಸಭೆ ನಡೆಸಿ, ''ಯಾವುದೇ ಕೊರತೆ ಇರಬಾರದು. ಕಾರ್ಯಕ್ರಮ ಸುವ್ಯವಸ್ಥಿತವಾಗಿ ನಡೆಯಬೇಕು'' ಎಂದು ಸೂಚನೆ ನೀಡಿದ್ದಾರೆ.

ಈ ಸಮಾವೇಶಕ್ಕೆ ಬೆಳಗಾವಿ ಜಿಲ್ಲೆಯಿಂದಲೇ 20,000 ಮಂದಿ ಬರುವ ನಿರೀಕ್ಷೆಯಿದೆ. ಲಕ್ಷಾಂತರ ಕಾರ್ಯಕರ್ತರ ಸಂಗಮವಾಗುವ ಸಾಧ್ಯತೆಯಿದೆ. ಜನರೊಂದಿಗೆ ಜನತಾದಳ ಪ್ರವಾಸದ ಭಾಗವಾಗಿ ನಿಖಿಲ್ ಅವರು ಈ ಸಮಾವೇಶವನ್ನು ಯುವಕರಿಗೆ ಮತ್ತು ರೈತರಿಗೆ ಸಂಬಂಧಿಸಿದಂತೆ ವಿನ್ಯಾಸಗೊಳಿಸಿದ್ದಾರೆ. ಇದು ಕೇವಲ ಸಮಾವೇಶವಲ್ಲ; ಉತ್ತರ ಕರ್ನಾಟಕದಲ್ಲಿ ಪಕ್ಷದ ಪುನಶ್ಚೇತನದ ಘೋಷಣೆ ಎನ್ನಲಾಗಿದೆ.

2 ದಶಕಗಳ ಹಿಂದಿನ ಬಲ ಇಂದಿನ ಹಿನ್ನಡೆ

20 ವರ್ಷಗಳ ಹಿಂದೆ ಉತ್ತರ ಕರ್ನಾಟಕದಲ್ಲಿ ಜೆಡಿಎಸ್‌ಗೆ ಪ್ರತಿ ಜಿಲ್ಲೆಯಲ್ಲಿ ಎರಡರಿಂದ ಮೂರು ಮಂದಿ ಶಾಸಕರು ಇದ್ದರು. ಆದರೆ, 2023ರ ವಿಧಾನಸಭೆ ಚುನಾವಣೆಯಲ್ಲಿ ಜೆಡಿಎಸ್ ಉತ್ತರದಲ್ಲಿ ಒಂದೂ ಸೀಟು ಗೆದ್ದಿಲ್ಲ. ವೋಟ್ ಶೇರ್ ಶೇ.5ಕ್ಕಿಂತಲೂ ಕಡಿಮೆ ಇದೆ. ಲಿಂಗಾಯತರು ಹೆಚ್ಚಾಗಿರುವ ಪ್ರದೇಶದಲ್ಲಿ ಒಕ್ಕಲಿಗ ಆಧರಿತ ಪಕ್ಷ ಎಂಬ ಇಮೇಜ್, ಕುಟುಂಬ ರಾಜಕೀಯದ ಟೀಕೆಯಂತಹ ಪ್ರಮುಖ ಕಾರಣಗಳಿಂದಲೇ ಜೆಡಿಎಸ್‌ಗೆ ಹಿನ್ನಡೆಯಾಗಿದೆ ಎಂಬುದು ಸ್ಥಳೀಯರ ಅಭಿಪ್ರಾಯವಾಗಿದೆ.

ಹಳೆ ಮೈಸೂರು ಭಾಗವನ್ನಷ್ಟೇ ಕೇಂದ್ರೀಕರಿಸಿ ಜೆಡಿಎಸ್ ಕಟ್ಟಲಾಗುತ್ತದೆ ಎಂಬ ಮಾತುಗಳು ಈಗಲೂ ಚಾಲ್ತಿಯಲ್ಲಿದ್ದರೂ, ಪ್ರಧಾನಿಯಾಗಿದ್ದಾಗ ದೇವೇಗೌಡರು ಹಾಗೂ ಸಿಎಂ ಆಗಿದ್ದಾಗ ಕುಮಾರಸ್ವಾಮಿಯವರು ಉತ್ತರಕ್ಕೆ ಹಲವು ಕೊಡುಗೆ ನೀಡಿದ್ದಾರೆ. ಅದನ್ನು ಈ ಭಾಗದ ಜನತೆಗೆ ಮನವರಿಕೆ ಮಾಡಿಕೊಟ್ಟು ಜೆಡಿಎಸ್ ಪಕ್ಷವನ್ನು ಬಲಿಷ್ಠವಾಗಿ ಬೆಳೆಸುವ ಲೆಕ್ಕಾಚಾರದೊಂದಿಗೆ ಸಮಾವೇಶಕ್ಕೆ ವೇದಿಕೆ ಸಿದ್ಧ ಮಾಡಲಾಗುತ್ತಿದೆ ಎಂಬ ವಿಶ್ಲೇಷಣೆ ನಡೆದಿದೆ.

''ದೇವೇಗೌಡರು ಪ್ರಧಾನಿಯಾಗಿದ್ದಾಗ ತ್ವರಿತ ನೀರಾವರಿ ಅನುಷ್ಠಾನ(ಎಕ್ಸ ಲರೇಟೆಡ್ ಇರಿಗೇಶನ್) ಸ್ಕೀಮ್ ಜಾರಿಗೊಳಿಸಿ ಕೃಷ್ಣ ಮೇಲ್ದಂಡೆ ಯೋಜನೆಗೆ 12 ಸಾವಿರ ಕೋಟಿ ರೂಪಾಯಿ ಅನುದಾನ ಒದಗಿಸಿದ್ದರು. ತುಂಡು ಗುತ್ತಿಗೆ ನೀಡಿ ನೀರಾವರಿ ಪೂರ್ಣಗೊಳ್ಳಲು ಮಹತ್ವದ ಪಾತ್ರ ವಹಿಸಿದ್ದು, ಈ ಭಾಗದ ಜನಮಾನಸದಲ್ಲಿದೆ. ಬೆಳಗಾವಿಯಲ್ಲಿ ಸುವರ್ಣ ಸೌಧ ನಿರ್ಮಾಣಕ್ಕೆ ಚಾಲನೆ ನೀಡಿ ಉತ್ತರ ಕರ್ನಾಟಕದ ಅಭಿವೃದ್ಧಿ ಬಾಗಿಲು ತೆರೆದಿದ್ದೇ ಕುಮಾರಸ್ವಾಮಿ ಎಂಬ ವಿಚಾರವನ್ನು ಈ ಭಾಗದ ಜನರಿಗೆ ಪಕ್ಷದ ಮುಖಂಡರು ಮನವರಿಕೆ ಮಾಡಿಕೊಡಲಾಗುತ್ತದೆ'' ಎನ್ನುತ್ತಾರೆ ಜೆಡಿಎಸ್ ಬೆಂಬಲಿಗರು.

ಜೆಡಿಎಸ್ ಕಾರ್ಯಕರ್ತ ರಾಘವೇಂದ್ರ ಈ ದಿನ.ಕಾಮ್‌ನೊಂದಿಗೆ ಮಾತನಾಡಿ, ''ಪಕ್ಷ ಬಲವರ್ಧನೆಗೆ ಈ ಸಮಾವೇಶ ಪೂರಕವಾಗಿದೆ. ಜನ ರೈತಪರ ಪಕ್ಷವನ್ನು ಯಾವತ್ತೂ ಕೈಬಿಟ್ಟಿಲ್ಲ, ಈಗಲೂ ಬಿಡುವುದಿಲ್ಲ. ಅದಕ್ಕೆ ಉದಾಹರಣೆ ನಮ್ಮ ಕ್ಷೇತ್ರದ ಶಾಸಕರು'' ಎನ್ನುತ್ತಾರೆ.

ಆದರೆ ಜೆಡಿಎಸ್ ನಾಯಕರು, ''ಇದು ಕೇವಲ ಚುನಾವಣಾ ಫಲಿತಾಂಶಕ್ಕಾಗಿ ಅಲ್ಲ. ಜನರ ಮನಸ್ಸಿ ನಲ್ಲಿ ನಾವಿದ್ದೇವೆ. ದೇವೇಗೌಡ-ಕುಮಾರಸ್ವಾಮಿ ಕೊಡುಗೆಗಳು ರೈತರ ನೆನಪಿನಲ್ಲಿವೆ'' ಎನ್ನುತ್ತ ಸಮಾವೇಶದಲ್ಲಿ ಜೆಡಿಎಸ್ ರೈತಪರ ಪಕ್ಷ ಎಂಬ ಸಂದೇಶದೊಂದಿಗೆ ಮನವರಿಕೆ ಮಾಡುವುದು ಪಕ್ಷದ ಲೆಕ್ಕಾಚಾರವಾಗಿದೆ.

ನಿಖಿಲ್ ಅವರ ತೀವ್ರ ಟೀಕೆ: ಸಮಾವೇಶಕ್ಕೆ ರಣತಂತ್ರ

ವಿಜಯಪುರ ಭೇಟಿಯ ವೇಳೆ ನಿಖಿಲ್ ಅವರು ಕಾಂಗ್ರೆಸ್ ಸರ್ಕಾರದ 1000 ದಿನಗಳ ಸಾಧನೆಯನ್ನು ಹೇಳುತ್ತ, ''ಪ್ರತಿ ವರ್ಷ ಲಕ್ಷ ಕೋಟಿ ಸಾಲ ಮಾಡುತ್ತಿರುವ ಕಾಂಗ್ರೆಸ್ ಸರ್ಕಾರಕ್ಕೆ ಸಾಧನೆ ಎಂದರೆ ಸಾಲದ ಹೊರೆಯಷ್ಟೇ'' ಎಂದು ಲೇವಡಿ ಮಾಡಿದರು.

''ಸಿದ್ದರಾಮಯ್ಯ ಅವರನ್ನು ಜೆಡಿಎಸ್‌ನಿಂದ ಡಿಸಿಎಂ ಮಾಡದಿದ್ದರೆ ಇಂದು ಸಿಎಂ ಆಗುತ್ತಿದ್ದರಾ'' ಎಂದು ಪ್ರಶ್ನಿಸಿದ ಅವರು, ಜೆಡಿಎಸ್,

ಬಿಜೆಪಿ ಜತೆ ವಿಲೀನ ಸಾಧ್ಯವಿಲ್ಲ, ಕಾಂಗ್ರೆಸ್ ವಿರುದ್ಧ ಒಗ್ಗಟ್ಟು ಎಂದು ಸಮರ್ಥಿಸಿಕೊಂಡಿದ್ದು, 2024ರ ಲೋಕಸಭೆಯಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿ ಉತ್ತರದಲ್ಲಿ ಕೆಲಸ ಮಾಡಿದೆ. 2028ರ ವಿಧಾನಸಭೆಗೆ ಇದೇ ರಣತಂತ್ರ ಮುಂದುವರಿಯಲಿದೆ ಎಂಬ ಅಭಿಪ್ರಾಯ ವ್ಯಕ್ತಪಡಿಸಿದರು.

ಏನು ನಿರೀಕ್ಷೆ? ರಾಜಕೀಯ ವಿಶ್ಲೇಷಕರ ಅಭಿಪ್ರಾಯ

ಈ ಸಮಾವೇಶ ಯಶಸ್ವಿಯಾದರೆ ಉತ್ತರದಲ್ಲಿ ಜೆಡಿಎಸ್ ವೋಟ್ ಶೇರ್ 8-12%ಗೆ ಏರಬಹುದು. 2028ರಲ್ಲಿ 4-6 ಸೀಟುಗಳನ್ನು ಗೆಲ್ಲಬಹುದು. ಆದರೆ ಲಿಂಗಾಯತ-ಒಕ್ಕಲಿಗ ವಿಭಜನೆ, ಬಿಜೆಪಿ-ಕಾಂಗ್ರೆಸ್ ಧ್ರುವೀಕರಣವನ್ನು ಮೀರಬೇಕು. ಜತೆಗೆ ಫೆಬ್ರವರಿ 27ರಂದು ವಿಜಯಪುರದ ಮೈದಾನದಲ್ಲಿ ಎಷ್ಟು ಜನಸಾಗರ ಸೇರುತ್ತದೆ, ಎಷ್ಟು ಉತ್ಸಾ ಹ ತುಂಬುತ್ತದೆ ಎಂಬುದು ಮುಂದಿನ 7 ದಿನಗಳಲ್ಲಿ ನಿರ್ಧಾರವಾಗುತ್ತದೆ. ಆದರೆ ಒಂದು ವಿಷಯ ಸ್ಪಷ್ಟ, ಜೆಡಿಎಸ್ ಇನ್ನು ದಕ್ಷಿಣದ ಪಕ್ಷವಾಗಿ ಮಾತ್ರ ಉಳಿಯುವುದಿಲ್ಲ. ಉತ್ತರದಲ್ಲಿ ಬೇರು ಬಿಡುವ ಪ್ರಯತ್ನ ಆರಂಭವಾಗಿದೆ ಎಂಬುದು ರಾಜಕೀಯ ತಜ್ಞರ ಅಭಿಪ್ರಾಯವಾಗಿದೆ.

ವಿಜಯಪುರ ಗುಮ್ಮಟ, ಗೋಲ್ ಗುಂಬಜ್‌ಗಳ ನಗರಿ. ಇಲ್ಲಿನ ಮಣ್ಣಿನಲ್ಲಿ ಇತಿಹಾಸದ ಸುಗಂಧವಿದೆ. ಆದರೆ ಈಗ ಇಲ್ಲಿ ಜೆಡಿಎಸ್ ನಡೆಸುತ್ತಿರುವ ಜನತಾ ಸಮಾವೇಶ ರಾಜಕೀಯವಾಗಿ ಮತ್ತು ಪಕ್ಷದ ಬಲವರ್ಧನೆಗೆ ಅಲ್ಲದೆ ಪಕ್ಷದ ಹೊಸ ಇತಿಹಾಸಕ್ಕೆ ಸಾಕ್ಷಿಯಾಗುವುದೇ ಎಂಬುದನ್ನು ಕಾದು ನೋಡಬೇಕಿದೆ.

ನಂದಿನಿ ಉತ್ಪನ್ನಗಳ ಬಗ್ಗೆ ಅಪಪ್ರಚಾರ: ವಾಸ್ತವವೋ, ಇತರೆ ಕಂಪನಿಗಳ ಮಾರುಕಟ್ಟೆ ತಂತ್ರವೋ?

ನಂದಿನಿ ಕುರಿತಾದ ವಿವಾದ-ವದಂತಿಗಳು ಸ್ಥಳೀಯ ಅಸ್ಮಿತೆ ಮತ್ತು ಮಾರುಕಟ್ಟೆ ಪೈಪೋಟಿಗೆ ಸಂಬಂಧಿಸಿದಂತೆ ಅಮುಲ್ ಮತ್ತು ನಂದಿನಿ ಬ್ರ್ಯಾಂಡ್‌ಗಳ ನಡುವಿನ ವಿವಾದದತ್ತ ಕಣ್ಣು ಹಾಯುವಂತೆ ಮಾಡಿದೆ. ಜತೆಗೆ ಅಮುಲ್ ಉತ್ಪನ್ನಗಳಲ್ಲಿ ಬ್ಯಾಕ್ಟೀರಿಯಾ ಪತ್ತೆಯಾಗಿದೆ ಎಂಬ ಸುದ್ದಿಯ ಬಗ್ಗೆಯೂ ಮತ್ತೆ ಚರ್ಚೆ ಆರಂಭವಾಗಿದೆ.

ಸದ್ಯ ಕರ್ನಾಟಕ ಹಾಲು ಒಕ್ಕೂಟದ (ಕೆಎಂಎಫ್) ನಂದಿನಿ ಬ್ರ್ಯಾಂಡ್‌ನ ಉತ್ಪನ್ನಗಳ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಊಹಾಪೋಹಗಳು, ವದಂತಿಗಳು ಅತಿ ವೇಗವಾಗಿ ಹರಡುತ್ತಿವೆ. ಅದಕ್ಕೆ ಕಾರಣ ಡಾ. ಶರಣ್ಯ ಸಂತೋಷ್ ಎಂಬುವವರು ಮಾಡಿರುವ ವಿಡಿಯೋ. ''ಕೆಎಂಎಫ್‌ನ ಉತ್ಪನ್ನಗಳಲ್ಲಿ ಫುಡ್ ಕಲರ್ ಮತ್ತು ಇತರೆ ಹಾನಿಕಾರಕ ರಾಸಾಯನಿಕಗಳಿವೆ. ಇದರಿಂದಾಗಿ ಕ್ಯಾನ್ಸ ರ್ ಬರುತ್ತದೆ'' ಎಂಬುದು ಡಾ. ಶರಣ್ಯ ಅವರ ಆರೋಪ.

ಈ ವಿಡಿಯೋ ವೈರಲ್ ಆಗುತ್ತಿದ್ದಂತೆ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗುತ್ತಿವೆ. ಕೆಲವರು ಶರಣ್ಯ ಬೆಂಬಲಕ್ಕೆ ನಿಂತರೆ ಇನ್ನು ಕೆಲವರು ಇವೆಲ್ಲವೂ ನಂದಿನಿಗೆ ಜಾಗತಿಕವಾಗಿ ಇರುವ ಸ್ಥಾನಮಾನವನ್ನು ತಗ್ಗಿಸಲು ಇತರೆ ಕಂಪನಿಗಳು ನಡೆಸುತ್ತಿರುವ ಮಾರುಕಟ್ಟೆ ತಂತ್ರವೆಂದು ಹೇಳುತ್ತಿದ್ದಾರೆ. ಈ ವಾದ-ವಿವಾದಗಳ ನಡುವೆ ಈವರೆಗೆ ನಂದಿನಿ ಉತ್ಪನ್ನಗಳನ್ನು ಬಳಸುತ್ತಾ ಮತ್ತು ಈಗಲೂ ಬಳಸುತ್ತಿರುವ ಜನರು ಆತಂಕಕ್ಕೆ ಒಳಗಾಗುತ್ತಿರುವುದು ವಾಸ್ತವ.

ಡಾ. ಶರಣ್ಯ ಅವರ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದ್ದಂತೆ ಕೆಎಂಎಫ್ ತನ್ನ ಜನಪ್ರಿಯ ಉತ್ಪನ್ನಗಳು ಸುರಕ್ಷಿತವೆಂದು ಸ್ಪಷ್ಟಣೆಯನ್ನು ನೀಡಿದೆ. ಹಾಗೆಯೇ ಡಾ. ಶರಣ್ಯ ಸಂತೋಷ್ ವಿರುದ್ಧ ಎಫ್‌ಐಆರ್ ಕೂಡಾ ದಾಖಲಾಗಿದೆ. ''ಈ ಆರೋಪಗಳು ಶುದ್ಧ ಸುಳ್ಳು. ಕೆಎಂಎಫ್ ಉತ್ಪನ್ನ ನೈಸರ್ಗಿಕವಾಗಿ ತಯಾರಿಸುತ್ತಿದ್ದೇವೆ. ಈವರೆಗೂ ಕೆಎಂಎಫ್ ಉತ್ಪನ್ನಗಳ ಬಗ್ಗೆ ಯಾವುದೇ ದೂರು ಬಂದಿಲ್ಲ. ಯಾವುದೇ ರಾಸಾಯನಿಕಗಳನ್ನು ನಾವು ಹಾಕುವುದಿಲ್ಲ'' ಎಂದು ಕೆಎಂಎಫ್ ವ್ಯವಸ್ಥಾಪಕ ನಿರ್ದೇಶಕ ಬಿ ಶಿವಸ್ವಾಮಿ ಸ್ಪಷ್ಟನೆಯನ್ನು ನೀಡಿದ್ದಾರೆ. ಇನ್ನೊಂದೆಡೆ ''ಇತರ ಕಂಪನಿಯವರು ನಮ್ಮ ನಂದಿನಿಯ ಬಗ್ಗೆ ಅಪಪ್ರಚಾರ ಮಾಡುತ್ತಿದ್ದಾರೆ'' ಎಂದು ಪಶುಸಂಗೋಪನಾ ಇಲಾಖೆ ಸಚಿವ ಕೆ. ವೆಂಕಟೇಶ್ ಆರೋಪಿಸಿದ್ದಾರೆ.

ಈ ಎಲ್ಲ ಬೆಳವಣಿಗೆಗಳು ಸ್ಥಳೀಯ ಅಸ್ಮಿತೆ ಮತ್ತು ಮಾರುಕಟ್ಟೆ ಪೈಪೋಟಿಗೆ ಸಂಬಂಧಿಸಿದಂತೆ ಅಮುಲ್ ಮತ್ತು ನಂದಿನಿ ಬ್ರ್ಯಾಂಡ್‌ಗಳ ನಡುವಿನ ವಿವಾದದತ್ತ ಕಣ್ಣು ಹಾಯುವಂತೆ ಮಾಡಿದೆ. ಜತೆಗೆ ಅಮುಲ್ ಉತ್ಪನ್ನಗಳಲ್ಲಿ ಬ್ಯಾಕ್ಟೀರಿಯಾ ಪತ್ತೆಯಾಗಿದೆ ಎಂಬ ಸುದ್ದಿಯ ಬಗ್ಗೆಯೂ ಮತ್ತೆ ಚರ್ಚೆ ಆರಂಭವಾಗಿದೆ. ಇವೆಲ್ಲವೂ ನಂದಿನಿ ಉತ್ಪನ್ನದ ವಿಸ್ತರಣೆಗೊಂಡಿರುವ ಮಾರುಕಟ್ಟೆಯನ್ನು ಕ್ಷೀಣಿಸುವಂತೆ ಮಾಡುವ ತಂತ್ರದತ್ತ ಬೆರಳು ಮಾಡಿದೆ.

2022ರ ಡಿಸೆಂಬರ್‌ನಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಮಂಡ್ಯದಲ್ಲಿ ಮೆಗಾ ಡೈರಿ ಉದ್ಘಾಟಿಸುವಾಗ, ಗುಜರಾತ್‌ನ ಅಮುಲ್ ಮತ್ತು ಕರ್ನಾಟಕದ ನಂದಿನಿ ಪರಸ್ಪರ ಸಹಕರಿಸಬೇಕು. ಕರ್ನಾಟಕದ ಹೈನುಗಾರಿಕೆಯನ್ನು ಉತ್ತೇಜಿಸಲು ಅಮುಲ್ ಸಂಸ್ಥೆಯು ಕೆಎಂಎಫ್‌ಗೆ ಎಲ್ಲ ರೀತಿಯ ತಾಂತ್ರಿಕ ಸಹಕಾರ ಮತ್ತು ಮಾರ್ಗದರ್ಶನ ನೀಡಲಿದೆ. ಮೂರು ವರ್ಷಗಳಲ್ಲಿ ರಾಜ್ಯದ ಪ್ರತಿ ಗ್ರಾಮ ಪಂಚಾಯತ್‌ನಲ್ಲಿ ಪ್ರಾಥಮಿಕ ಡೈರಿಗಳನ್ನು ಸ್ಥಾಪಿಸಲಿದೆ ಎಂದು ಹೇಳಿಕೆ ನೀಡಿದ್ದರು.



ಈ ಹೇಳಿಕೆಯು ವಿವಾದಕ್ಕೆ ನಾಂದಿ ಹಾಡಿತ್ತು. ಸರ್ಕಾರಿ ಬ್ಯಾಂಕ್‌ಗಳನ್ನು ಗುಜರಾತ್‌ನ ಖಾಸಗಿ ಬ್ಯಾಂಕ್‌ಗಳೊಂದಿಗೆ ವಿಲೀನ ಮಾಡಿದಂತೆ ನಂದಿನಿಯನ್ನು ಅಮುಲ್ ಜೊತೆ ವಿಲೀನಗೊಳಿಸುವ ಸಂಚು ರೂಪಿಸಲಾಗುತ್ತಿದೆ ಎಂಬ ಆರೋಪಗಳು ಕೇಳಿಬಂದವು.

ಅಂತೆಯೇ, 2023ರ ಏಪ್ರಿಲ್‌ನಲ್ಲಿ ಅಮುಲ್ ಸಂಸ್ಥೆಯು ಬೆಂಗಳೂರಿನಲ್ಲಿ ತನ್ನ ಹಾಲು ಮತ್ತು ಮೊಸರನ್ನು ಆನ್‌ಲೈನ್ ಮೂಲಕ ಮಾರಾಟ ಮಾಡುವುದಾಗಿ ಘೋಷಿಸಿದ್ದು, ತೀವ್ರ ವಿರೋಧಕ್ಕೆ ಕಾರಣವಾಗಿತ್ತು. ಇವೆಲ್ಲವುದರ ನಡುವೆ ಇತ್ತೀಚೆಗೆ ಬೆಂಗಳೂರಿನ ನಮ್ಮ ಮೆಟ್ರೋ ನಿಲ್ದಾಣಗಳಲ್ಲಿ ಅಮುಲ್ ಮಳಿಗೆಗಳನ್ನು ತೆರೆಯಲು ಅವಕಾಶ ನೀಡಿದ್ದು, ಮತ್ತೆ ವಿವಾದಕ್ಕೆ ಕಾರಣವಾಗಿತ್ತು. 10 ಮೆಟ್ರೋ ನಿಲ್ದಾಣಗಳಲ್ಲಿ ಅಮುಲ್ ಕಿಯೋಸ್ಕ್‌ಗಳಿಗೆ ಟೆಂಡರ್ ಮೂಲಕ ಅನುಮತಿ ನೀಡಲಾಗಿದ್ದು, ನಂದಿನಿಗೆ ಆದ್ಯತೆ ನೀಡಿಲ್ಲ ಎಂದು ವಿಪಕ್ಷಗಳು ಟೀಕಿಸಿವೆ. ಆದರೆ ಮೆಟ್ರೋ ಟೆಂಡರ್ ಪ್ರಕ್ರಿಯೆಯಲ್ಲಿ ಅಮುಲ್ ಮಾತ್ರ ಭಾಗವಹಿಸಿತ್ತು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದರು. ಹಾಗೆಯೇ ಉಳಿದ ಎಂಟು ನಿಲ್ದಾಣಗಳಲ್ಲಿ ನಂದಿನಿ ಮಳಿಗೆಗಳನ್ನು ತೆರೆಯಲು ಕೆಎಂಎಫ್‌ಗೆ ಸೂಚಿಸಲಾಗಿತ್ತು.

ಇವಿಷ್ಟು ನಂದಿನಿ ಮತ್ತು ಅಮುಲ್ ಬ್ರ್ಯಾಂಡ್ ನಡುವೆ ವಿವಾದವನ್ನು ಹೆಚ್ಚಿಸುತ್ತಿರುವಂತೆಯೇ ಅಮುಲ್ ಬ್ಯಾಕ್ಟೀರಿಯಾ ಪ್ರಕರಣ ಮುನ್ನೆಲೆಗೆ ಬಂದಿದೆ. ಅಮುಲ್ ಹಾಲು, ಮೊಸರಿನಲ್ಲಿ ನಿಗದಿತ ಪ್ರಮಾಣಕ್ಕಿಂತ ಹೆಚ್ಚು ಬ್ಯಾಕ್ಟೀರಿಯಾಗಳಿವೆ ಎಂದು ಲ್ಯಾಬ್ ಟೆಸ್ಟಿಂಗ್ ಪ್ಲಾಟ್‌ಫಾರ್ಮ್ ಟ್ರಸ್ಟಿಫೈಡ್ ಎಂಬ ಸ್ವತಂತ್ರ ಸಂಸ್ಥೆಯು ಹೇಳಿದೆ. ಅಮುಲ್ ಹಾಲು ಮತ್ತು ಮೊಸರನ್ನು ಬ್ಲೈಂಡ್ ಟೆಸ್ಟ್‌ಗೆ ಅಂದರೆ ಬ್ರ್ಯಾಂಡ್ ಹೆಸರನ್ನು ಉಲ್ಲೇಖಿಸದೆ ಒಳಪಡಿಸಿದಾಗ, ಅಮುಲ್ ಪೌಚ್ ಹಾಲಿನಲ್ಲಿ ಕಾಲಿಫಾರ್ಮ್ ಬ್ಯಾಕ್ಟೀರಿಯಾಗಳ ಸಂಖ್ಯೆ ಭಾರತೀಯ ಆಹಾರ ಸುರಕ್ಷತೆ ಮತ್ತು ಮಾನದಂಡಗಳ ಪ್ರಾಧಿಕಾರ () ನಿಗದಿಪಡಿಸಿದ ಮಿತಿಗಿಂತ 98 ಪಟ್ಟು ಹೆಚ್ಚು ಇದೆ. ಅಂತೆಯೇ, ಅಮುಲ್ ಮಸ್ತಿ ಮೊಸರಿನಲ್ಲಿಯೂ 2,100 ಪಟ್ಟು ಹೆಚ್ಚಿವೆ ಎಂಬುದು ಕಂಡುಬಂದಿದೆ ಎಂದು ವರದಿಯಾಗಿದೆ. ಇದರಿಂದಾಗಿ ಹೊಟ್ಟೆ ಉಬ್ಬರ, ಅತಿಸಾರ, ವಾಂತಿ, ತಲೆನೋವು, ಜ್ವರ ಲಕ್ಷಣಗಳು ಕಂಡುಬರುತ್ತವೆ ಎಂದು ಹೇಳಲಾಗಿತ್ತು.

ಆದರೆ ಈ ಆರೋಪಗಳನ್ನು ಅಮುಲ್ ಸಂಸ್ಥೆಯು ತಿರಸ್ಕರಿಸಿತ್ತು. ಮೊಸರು ಎಂಬುದು ಜೈವಿಕ ಉತ್ಪನ್ನ, ಅದರಲ್ಲಿ ಆರೋಗ್ಯಕರ ಬ್ಯಾಕ್ಟೀರಿಯಾಗಳು ಇರುತ್ತವೆ ಎಂದು ತಿಳಿಸಿದೆ. ಹಾಗೆಯೇ ಪರೀಕ್ಷೆಗೆ ಒಳಪಡಿಸಿದ ಮಾದರಿಗಳನ್ನು ಹೇಗೆ ಸಂಗ್ರಹಿಸಲಾಗಿದೆ ಮತ್ತು ಸಾಗಿಸಲಾಗಿದೆ ಎಂಬ ಬಗ್ಗೆ ಸ್ಪಷ್ಟತೆ ಇಲ್ಲದ ಕಾರಣ ವರದಿಯನ್ನು ನಂಬಲಾಗದು ಎಂದು ಕಂಪನಿ ಹೇಳಿದೆ. ಈ ಆರೋಪ ಕೇವಲ ಅಮುಲ್ ಮೇಲಷ್ಟೇ ಅಲ್ಲದೆ, ಮದರ್ ಡೈರಿ ( ) ಮತ್ತು ಕಂಟ್ರಿ ಡಿಲೈಟ್ ( ) ನಂತಹ ಇತರ ಪ್ರಮುಖ ಬ್ರ್ಯಾಂಡ್‌ಗಳ ಮೇಲೆಯೂ ಕೇಳಿಬಂದಿದೆ. ಇವೆಲ್ಲವುದರ ನಡುವೆ ಈ ಎಲ್ಲಾ ವದಂತಿಗಳನ್ನು ಅಮುಲ್‌ನ ಪ್ರತಿಸ್ಪರ್ಧಿ ಸಂಸ್ಥೆ ನಡೆಸುತ್ತಿರುವುದು ಎಂಬ ವಾದಗಳು ಸಾಮಾಜಿಕ ಜಾಲತಾಣದಲ್ಲಿ ಹರಿದಾಡಿತ್ತು. ಇದೀಗ ನಂದಿನಿ ವಿಚಾರದಲ್ಲಿಯೂ ನಡೆಯುತ್ತಿರುವುದು ಅದುವೇ. ಇತರೆ ಕಂಪನಿಗಳ ಮಾರುಕಟ್ಟೆ ತಂತ್ರವೋ ಎಂಬ ಪ್ರಶ್ನೆಯೂ ನೆಟ್ಟಿಗರಲ್ಲಿ ಹುಟ್ಟಿಕೊಂಡಿದೆ.

ಏನೇ ಆದರೂ ಅಂತಿಮವಾಗಿ ಗೊಂದಲಕ್ಕೆ, ಆತಂಕಕ್ಕೆ ಒಳಗಾಗುತ್ತಿರುವುದು ಜನಸಾಮಾನ್ಯರು. ಡಾ. ಶರಣ್ಯ ವಿಡಿಯೋ ಮೂಲಕ ಮಾಡಿದ ಒಂದು ಆರೋಪವು, ಬರೀ ಆರೋಪವಾಗಿ ಕಾಣದು. ಇದು ಜನರ ನಂಬಿಕೆಯನ್ನು ಪ್ರಶ್ನಿಸುವ, ಜನರನ್ನು ಗೊಂದಲಕ್ಕೆ ದೂಡುವ ಕೃತ್ಯವಲ್ಲವೇ? ಕ್ಯಾನ್ಸ ರ್ ಎಂದರೆ ಯಾರಾದರೂ ಭಯಪಡುತ್ತಾರೆ. ಹಾಗಿದ್ದಾಗ ಶರಣ್ಯ ಯಾವ ಆಧಾರದಲ್ಲಿ ನಂದಿನಿ ಉತ್ಪನ್ನಗಳಿಂದ ಕ್ಯಾನ್ಸ ರ್ ಬರುತ್ತದೆ ಎಂದು ಹೇಳಿರುವುದು? ಪರೀಕ್ಷಾ ವರದಿ ಆಧಾರದಲ್ಲಿ ಶರಣ್ಯ ಈ ಆರೋಪ ಮಾಡಿರುವುದೇ? ಹೀಗಿರುವಾಗ ಸದ್ಯ ನಂದಿನಿ ಉತ್ಪನ್ನಗಳನ್ನೂ ಪುನರ್ ಪರೀಕ್ಷೆಗೆ ಒಳಪಡಿಸಬೇಕಾಗುತ್ತದೆಯೇ? ಅಷ್ಟಕ್ಕೂ ಅಮುಲ್‌ನಲ್ಲಿ ಬ್ಯಾಕ್ಟೀರಿಯಾಗಳು ಅಧಿಕವಾಗಿವೆ ಎಂಬ ಪರೀಕ್ಷಾ ವರದಿಗಳು ಸಾಮಾಜಿಕ ಜಾಲತಾಣದಲ್ಲಿ ಹರಿದಾಡಿದಾಗ ಶರಣ್ಯ ಅವರು ಏಕೆ ಧ್ವನಿ ಎತ್ತಿಲ್ಲ? ಹೀಗೆ ಹಲವು ಪ್ರಶ್ನೆಗಳು ನೆಟ್ಟಿಗರದ್ದು, ನಮ್ಮದು ನಿಮ್ಮದು!

ಕೇರಳ ವಿಧಾನಸಭೆ ಚುನಾವಣೆ: ಕ್ರೈಸ್ತ ಸಮುದಾಯದ ಮತಗಳು ಗೇಮ್ ಚೇಂಜರ ಆಗಬಹುದೇ?

ಕಾಂಗ್ರೆಸ್ ಮೈತ್ರಿಯಲ್ಲಿ ಮುಸ್ಲಿಂ ಲೀಗ್‌ನ ಪ್ರಭಾವ ಹೆಚ್ಚಾಗುತ್ತಿದೆ ಎಂಬ ಆರೋಪಗಳೂ ಇವೆ. ಇದರಿಂದ ಕ್ರೈಸ್ತ ಸಮುದಾಯ ಯುಡಿಎಫ್ ಮೇಲೆ ಅಸಮಾಧಾನ ಹೊಂದಿದೆ. ಇದನ್ನು ಎಡಪಕ್ಷಗಳು ತಮ್ಮ ಲಾಭಕ್ಕೆ ಬಳಸಿಕೊಳ್ಳುತ್ತಿವೆ. ಇನ್ನೊಂದೆಡೆ ಬಿಜೆಪಿ ಕೋಮು ಆಧಾರದಲ್ಲಿಯೇ ರಾಜಕೀಯದಾಟ ಮುಂದುವರೆಸಿದೆ.

ಕೇರಳದಲ್ಲಿ ಏಪ್ರಿಲ್-ಮೇ ತಿಂಗಳ ಅವಧಿಯಲ್ಲಿ 140 ಸದಸ್ಯ ಬಲದ ವಿಧಾನಸಭೆ ಚುನಾವಣೆ ನಡೆಯಲಿದ್ದು, ಈಗಾಗಲೇ ಕಾಂಗ್ರೆಸ್ ನೇತೃತ್ವದ ಯುನೈಟೆಡ್ ಡೆಮಾಕ್ರಟಿಕ್ ಫ್ರಂಟ್ () ಮತ್ತು ಸಿಪಿಐಎಂ ನೇತೃತ್ವದ ಎಡ ಪ್ರಜಾಸತ್ತಾತ್ಮಕ ರಂಗದ () ಪ್ರಚಾರದಲ್ಲಿ ತೊಡಗಿದೆ. ಈ ಬಾರಿ ಬಿಜೆಪಿ ತನ್ನ ಕೋಮುದ್ವೇಷದ ವಿಷ ಬೀಜವನ್ನು ಹರಡುವಲ್ಲಿ ಬಹುತೇಕ ಯಶಸ್ವಿಕಂಡು ಅಲ್ಲಲ್ಲಿ ಮತ ಕಬಳಿಸುವ ಯತ್ನದಲ್ಲಿದೆ. ಏನೇ ಆದರೂ ಕೇರಳದಲ್ಲಿ ಚುನಾವಣೆಯ ಫಲಿತಾಂಶವನ್ನು ನಿರ್ಧರಿಸುವುದು ಕ್ರೈಸ್ತ ಸಮುದಾಯದ ಮತಗಳು.



ಕೇರಳದ ರಾಜಕೀಯ ಮತ್ತು ಸಾಮಾಜಿಕ ಭೂಪಟದಲ್ಲಿ ಕ್ರೈಸ್ತ ಸಮುದಾಯವು ಯಾವಾಗಲೂ ನಿರ್ಣಾಯಕ ಪಾತ್ರವನ್ನು ವಹಿಸುತ್ತಾ ಬಂದಿದೆ. ಪ್ರಸ್ತುತ ಬದಲಾಗುತ್ತಿರುವ ರಾಜಕೀಯ ಪರಿಸ್ಥಿತಿಯಲ್ಲಿಯೂ ಕ್ರೈಸ್ತ ಸಮುದಾಯದ ಮತಗಳೇ ಗೇಮ್ ಚೇಂಜರ್ ಆಗುವ ಸಾಧ್ಯತೆಗಳು ಹೆಚ್ಚು. ಕೇರಳದ ಒಟ್ಟು 140 ವಿಧಾನಸಭಾ ಕ್ಷೇತ್ರಗಳ ಪೈಕಿ ಸುಮಾರು 45-50 ಕ್ಷೇತ್ರಗಳಲ್ಲಿ ಕ್ರೈಸ್ತ ಸಮುದಾಯದ ಬೆಂಬಲವಿಲ್ಲದೆ ಯಾವುದೇ ಪಕ್ಷ ಅಧಿಕಾರಕ್ಕೆ ಬರಲು ಸಾಧ್ಯವಿಲ್ಲ. ಆದ್ದರಿಂದಾಗಿ ವಿವಿಧ ಪಕ್ಷಗಳು ಕ್ರೈಸ್ತ ಸಮುದಾಯದ ಒಲೈಕೆಗಾಗಿ ಶ್ರಮಿಸುತ್ತಿದ್ದಾರೆ. ಯಾರಿಗೆ ಮತಗಿಟ್ಟಲಿದೆ ಎಂಬುದು ಸದ್ಯ ಪ್ರಶ್ನೆಯಷ್ಟೆ.

ಕೇರಳದಲ್ಲಿ ಪ್ರಧಾನ ವಿಪಕ್ಷವಾಗಿರುವ ಕಾಂಗ್ರೆಸ್ ಜತೆಗಿನ ಸಮುದಾಯದ ದೀರ್ಘಕಾಲದ ಬಾಂಧವ್ಯ ಇತ್ತೀಚೆಗೆ ಕೊಂಚ ಹದಗೆಟ್ಟಂತಿದೆ. ಕಾಂಗ್ರೆಸ್ ಮುಸ್ಲಿಮರ ಪರ ಎಂಬ ರಾಜಕೀಯ ಆರೋಪಗಳೇ ಇದಕ್ಕೆ ಕಾರಣ. ಇವೆಲ್ಲವೂ ಕೇರಳದಲ್ಲಿ ಸಾಂಪ್ರದಾಯಿಕ ರಾಜಕೀಯ ವ್ಯವಸ್ಥೆಯನ್ನೇ ಬದಲಾಯಿಸಿದೆ. ಕ್ರೈಸ್ತರ ಮತವನ್ನು ಸೆಳೆಯುವ ಸತತ ಪ್ರಯತ್ನವನ್ನು ಎಲ್‌ಡಿಎಫ್ ಮಾಡುತ್ತಲೇ ಇದೆ. 2021ರಲ್ಲಿ ಕೊಂಚ ಸಫಲವೂ ಆಗಿದೆ. ಇವೆಲ್ಲವುದರ ನಡುವೆ ಇತರೆ ರಾಜ್ಯಗಳಲ್ಲಿ ಕ್ರೈಸ್ತ ಸಮುದಾಯದ ಮೇಲೆ ದಾಳಿ, ದಬ್ಬಾಳಿಕೆ ನಡೆಸುವ ಬಿಜೆಪಿ ಕ್ರೈಸ್ತ ಮತಗಳನ್ನು ಬಾಚಿಕೊಳ್ಳಲು ತಂತ್ರ ರೂಪಿಸುತ್ತಿದೆ.

2011ರ ಜನಗಣತಿಯ ಪ್ರಕಾರ ಕೇರಳದ ಒಟ್ಟು ಜನಸಂಖ್ಯೆಯಲ್ಲಿ ಕ್ರೈಸ್ತರ ಪಾಲು ಸುಮಾರು 18.4%. ಪ್ರಸ್ತುತ ಇದು ಸುಮಾರು 17-18% ಇರಬಹುದು ಎಂದು ಅಂದಾಜಿಸಲಾಗಿದೆ. ಕೇರಳದಲ್ಲಿ ಹಿಂದೂಗಳು 54.7%, ಮುಸ್ಲಿಮರು 26.6% ಇದ್ದಾರೆ. ಕೆಲವು ಜಿಲ್ಲೆಗಳಲ್ಲಿ ಕ್ರೈಸ್ತ ಸಮುದಾಯವೇ ಅಧಿಕವಾಗಿದೆ. ಕೊಟ್ಟಾಯಂನಲ್ಲಿ 45%, ಪತ್ತನಂತಿಟ್ಟ, ಎರ್ನಾಕುಲಂನಲ್ಲಿ 38%, ಇಡುಕ್ಕಿಯಲ್ಲಿ 33%, ತ್ರಿಶೂರ್ ಮತ್ತು ವಯನಾಡಿನಲ್ಲಿ 20-25% ಪ್ರಮಾಣದಲ್ಲಿ ಕ್ರೈಸ್ತ ಮತದಾರರು ಇದ್ದಾರೆ.

ಹಿಂದಿನ ಚುನಾವಣೆಗಳತ್ತ ನಾವು ಕಣ್ಣಾಯಿಸಿದರೆ ಸಾಂಪ್ರದಾಯಿಕವಾಗಿ 2016ಕ್ಕಿಂತಲೂ ಮೊದಲು ಸುಮಾರು 70-80% ಮತಗಳು ಕಾಂಗ್ರೆಸ್ ನೇತೃತ್ವದ ಯುಡಿಎಫ್ ಪಾಲಾಗುತ್ತಿದ್ದವು. 2021ರ ವಿಧಾನಸಭಾ ಚುನಾವಣೆಯ ಸಂದರ್ಭದಲ್ಲಿ ಗಮನಾರ್ಹ ಬದಲಾವಣೆ ಕಂಡುಬಂದಿದೆ. ಸುಮಾರು 35-40% ಕ್ರೈಸ್ತ ಮತಗಳು ಎಲ್‌ಡಿಎಫ್ ಕಡೆಗೆ ವಾಲಿದೆ ಎನ್ನುತ್ತಾರೆ ವಿಶ್ಲೇಷಕರು. ಇದಕ್ಕೆ ಪ್ರಮುಖ ಕಾರಣ ಕೇರಳ ಕಾಂಗ್ರೆಸ್ (ಮಣಿ) ಎಡರಂಗಕ್ಕೆ ಸೇರಿದ್ದು ಎಂದರೆ ತಪ್ಪಾಗದು. ಇದೀಗ ಎಡ ಸರ್ಕಾರವು ಕಲ್ಯಾಣ ಯೋಜನೆಗಳು ಮತ್ತು ಮೂಲಸೌಕರ್ಯ ಅಭಿವೃದ್ಧಿಯ ಹೆಸರಿನಲ್ಲಿ ಕ್ರೈಸ್ತ ಸಮುದಾಯದ ವಿಶ್ವಾಸ ಗಳಿಸಲು ಪ್ರಯತ್ನಿಸುತ್ತಿವೆ. ಇತ್ತೀಚೆಗೆ ನಡೆದ ಚುನಾವಣೆ ವೇಳೆ ಕ್ರೈಸ್ತ ಬಾಹುಳ್ಯವಿರುವ ಕೆಲವು ಬೂತ್‌ಗಳಲ್ಲಿ ಬಿಜೆಪಿಯ ಮತ ಗಳಿಕೆ ಏರಿಕೆ ಕಂಡಿದೆ. ಈ ನಿಟ್ಟಿನಲ್ಲಿ ಪ್ರಸ್ತುತ ಬಿಜೆಪಿಯು ಕ್ರೈಸ್ತ ಸಮುದಾಯದಲ್ಲಿ ಸುಮಾರು 10-12% ಮತಗಳನ್ನು ಪಡೆಯುವ ಗುರಿಯನ್ನಿಟ್ಟುಕೊಂಡಿದೆ.

ಈ ಹಿಂದೆ ಕಾಂಗ್ರೆಸ್‌ನ ಭದ್ರಕೋಟೆಯಾಗಿದ್ದ ಮಧ್ಯ ಕೇರಳದ ಕೊಟ್ಟಾಯಂ, ಇಡುಕ್ಕಿ, ಪತ್ತನಂತಿಟ್ಟನ ಕ್ರೈಸ್ತ ಮತದಾರರು ಈಗ ಪರ್ಯಾಯಗಳನ್ನು ಹುಡುಕುತ್ತಿರುವುದು ವಾಸ್ತವ. ಇದಕ್ಕೆ ಮುಖ್ಯ ಕಾರಣ ಪ್ರಾದೇಶಿಕ ಪಕ್ಷ ಕೇರಳ ಕಾಂಗ್ರೆಸ್ (ಮಣಿ) ಬಣವು ಎಡರಂಗದ ಜತೆ ಸೇರಿರುವುದು ಮತ್ತು ನಾಯಕತ್ವದ ಕೊರತೆ. ಸಮುದಾಯದ ಹಿತಾಸಕ್ತಿಗಳನ್ನು ಕಾಪಾಡುವ ಪ್ರಬಲ ನಾಯಕತ್ವದ ಕೊರತೆ ಕಾಂಗ್ರೆಸ್‌ನಲ್ಲಿ ಕಾಣುತ್ತಿದೆ ಎಂಬ ಅಭಿಪ್ರಾಯಗಳೂ ಇವೆ. ಇವೆಲ್ಲವುದರ ನಡುವೆ ಕಾಂಗ್ರೆಸ್ ತನ್ನ ಮತ ಬ್ಯಾಂಕ್ ಅನ್ನು ಮರಳಿ ಪಡೆಯುವ ಸತತ ಪ್ರಯತ್ನದಲ್ಲಿದೆ. ಕ್ರೈಸ್ತ ಸಮುದಾಯವನ್ನು ಓಲೈಸಲು ಕಾಂಗ್ರೆಸ್ ಕಳೆದ ವರ್ಷ ತನ್ನ ರಾಜ್ಯ ಘಟಕದ ಮುಖ್ಯಸ್ಥರನ್ನಾಗಿ ಮೂರು ಬಾರಿ ಶಾಸಕರಾಗಿರುವ ಸನ್ನಿ ಜೋಸೆಫ್ ಅವರನ್ನು ನೇಮಿಸಿದೆ.

ಕಾಂಗ್ರೆಸ್ ಮೈತ್ರಿಯಲ್ಲಿ ಮುಸ್ಲಿಂ ಲೀಗ್‌ನ ಪ್ರಭಾವ ಹೆಚ್ಚಾಗುತ್ತಿದೆ ಎಂಬ ಆರೋಪಗಳೂ ಇವೆ. ಇದರಿಂದ ಕ್ರೈಸ್ತ ಸಮುದಾಯ ಯುಡಿಎಫ್ ಮೇಲೆ ಅಸಮಾಧಾನ ಹೊಂದಿದೆ. ಇದನ್ನು ಎಡಪಕ್ಷಗಳು ತಮ್ಮ ಲಾಭಕ್ಕೆ ಬಳಸಿಕೊಳ್ಳುತ್ತಿವೆ. ಇನ್ನೊಂದೆಡೆ ಬಿಜೆಪಿ ಕೋಮು ಆಧಾರದಲ್ಲಿಯೇ ರಾಜಕೀಯದಾಟ ಮುಂದುವರೆಸಿದೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಬಿಜೆಪಿ ನಾಯಕರುಗಳು ಚರ್ಚ್‌ಗಳ ಮುಖ್ಯಸ್ಥರನ್ನು ಭೇಟಿಯಾಗುತ್ತಿದ್ದಾರೆ. ಇತರೆ ರಾಜ್ಯಗಳಲ್ಲಿ ಕ್ರೈಸ್ತರು ಮತಾಂತರ ಮಾಡುವವರು, ಹಿಂದೂ ವಿರೋಧಿಗಳೆಂದು ಕರೆಯುವ ಬಿಜೆಪಿ ಕೇರಳದಲ್ಲಿ ಕ್ರೈಸ್ತರ ಮತಕ್ಕೆ ಬಲೆ ಬೀಸುತ್ತಲೇ ಇದೆ.

ಇಷ್ಟು ಮಾತ್ರವಲ್ಲದೆ ಪ್ಯಾಲೆಸ್ತೀನ್-ಇಸ್ರೇಲ್ ಸಂಘರ್ಷ, ಕೆಲವು ಆಫ್ರಿಕನ್ ದೇಶಗಳಲ್ಲಿನ ಜನಾಂಗೀಯ ಗುಂಪುಗಳ ನಡುವಿನ ಘರ್ಷಣೆಯು ಕೇರಳದಲ್ಲಿ ಮುಸ್ಲಿಮರ ವಿರುದ್ಧ ಕ್ರೈಸ್ತರ ಒಂದು ವಿಭಾಗದಲ್ಲಿ ಅಸಮಾಧಾನಕ್ಕೆ ಕಾರಣವಾಗಿದೆ. ಈ ವಿಭಜನೆಗೆ ಸಾಮಾಜಿಕ ಮಾಧ್ಯಮದಲ್ಲಿ ಸಕ್ರಿಯವಾಗಿರುವ ಬಿಜೆಪಿ ಪರ ಕ್ರಿಶ್ಚಿಯನ್ ಅಸೋಸಿಯೇಷನ್ ಮತ್ತು ಅಲೈಯನ್ಸ್ ಫಾರ್ ಸೋಶಿಯಲ್ ಆಕ್ಷನ್ () ಕಾರಣವೆಂದರೆ ತಪ್ಪಾಗದು. ಒಟ್ಟಿನಲ್ಲಿ ಲವ್ ಜಿಹಾದ್ ಎಂಬ ಕಪೋಲಕಲ್ಪಿತ ವಿಷಯ ಮತ್ತು ಮುಸ್ಲಿಂ ಜನಸಂಖ್ಯೆ ಹೆಚ್ಚಳ ಎಂಬ ಹುಸಿ ಸುಳ್ಳುಗಳನ್ನು ಮುಂದಿಟ್ಟುಕೊಂಡು ಬಿಜೆಪಿ ಕ್ರೈಸ್ತರನ್ನು ತನ್ನತ್ತ ಸೆಳೆಯುವ ಯತ್ನ ಮಾಡುತ್ತಲಿದೆ. ಕ್ರೈಸ್ತ ಸಮುದಾಯ ಬಿಜೆಪಿಯ ಕೋಮು ಆಟಕ್ಕೆ ಬಲಿಯಾಗುತ್ತದೆಯೇ, ಇಲ್ಲವೇ ಎಂಬುದರ ಮೇಲೆ ಕೇರಳದ ಚುನಾವಣಾ ಫಲಿತಾಂಶ ನಿಂತಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR